ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 120

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶುಕ್ರವಾರ: 17-04-2026

# ಜಮೀರ್ ಗೌರವಯುತ ವಿದಾಯಕ್ಕೆ ಕಾಂಗ್ರೆಸ್‌ನಲ್ಲಿ ತೆರೆಮರೆಯ ಕಸರತ್ತು

**ಬೆಂಗಳೂರು,ಏ.16–** ದಾವಣಗೆರೆ ವಿಧಾನಸಭೆಯ ಉಪಚುನಾವಣೆ ಹಿನ್ನೆಲೆಯಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರ ಗೌರವಯುತ ವಿದಾಯಕ್ಕೆ ಕಾಂಗ್ರೆಸ್‌ನಲ್ಲಿ ತೆರೆಮರೆಯ ಕಸರತ್ತುಗಳು ನಡೆಯುತ್ತಿದೆ.

ಈಗಾಗಲೇ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಸ್ಥಾನಕ್ಕೆ ವಿಧಾನ ಪರಿಷತ್ ಜಮೀರ್ ಅಹಮದ್ ರಾಜೀನಾಮೆ ನೀಡಿದ್ದಾರೆ. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಜೀರ್ ಅಹಮದ್ ಅವರನ್ನು ವಜಾಗೊಳಿಸಲಾಗಿದೆ. ಈ ಇಬ್ಬರ ತಲೆದಂಡದಿಂದ ಗಲಿಬಿಲಿಗೆ ಒಳಗಾಗಿರುವ ಸಚಿವ ಜಮೀರ್ ಅಹಮದ್ ಖಾನ್ ತಮ ಕುರ್ಚಿಗೆ ಒದಗಲಿರುವ ಕಂಟಕವನ್ನು ತಪ್ಪಿಸಿಕೊಳ್ಳಲು ನಾನಾ ರೀತಿಯ ಕಸರತ್ತು ನಡೆಸುತ್ತಿದ್ದಾರೆ.

ನಿನ್ನೆ ರಾತ್ರಿ ರಹಸ್ಯ ಸ್ಥಳದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಜಮೀರ್ ಅಹಮದ್ ಖಾನ್ ಅವರೊಂದಿಗೆ ಗಂಭೀರ ಚರ್ಚೆ ನಡೆಸಿದ್ದು, ಹುದ್ದೆ ತ್ಯಾಗಕ್ಕೆ ಮನವೊಲಿಸುವ ಪ್ರಯತ್ನ ನಡೆಸಿದ್ದಾರೆ.



ಆದರೆ ಇದಕ್ಕೆ ಜಮೀರ್ ಅಹಮದ್ ಖಾನ್ ಸುತರಾಮ್ ಒಪ್ಪಿಲ್ಲ. ನಜೀರ್ ಅಹಮದ್ ಅವರಂತೆ ನನ್ನನ್ನು ಸಚಿವ ಸ್ಥಾನದಿಂದ ಉಚ್ಚಾಟನೆ ಮಾಡಲಿ ಎಂದು ಪಟ್ಟು ಹಿಡಿದಿದ್ದಾರೆ. ಆದರೆ ಕಾಂಗ್ರೆಸ್ ಪಕ್ಷ ಜಮೀರ್ ಅವರಿಗೆ ಗೌರವಯುತ ವಿದಾಯ ನೀಡಲು ಪ್ರಯತ್ನಿಸುತ್ತಿದೆ ಎನ್ನಲಾಗಿದೆ. ಒಂದು ವೇಳೆ ಜಮೀರ್ ಅಹಮದ್ ಖಾನ್ ರಾಜೀನಾಮೆ ನೀಡದೇ ಇದ್ದರೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಈಗಾಗಲೇ ಚಿಂತನೆ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಅಲ್ಪಸಂಖ್ಯಾತ ಸಮುದಾಯದಲ್ಲಿ ಜಮೀರ್ ಇತ್ತೀ?ಚೆಗೆ ಪ್ರಭಾವಿ ನಾಯಕರೆಂದು ಗುರುತಿಸಿಕೊಂಡಿದ್ದಾರೆ. ಅವರನ್ನು ಏಕಾಏಕಿ ಸಂಪುಟದಿಂದ ವಜಾಗೊಳಿಸುವ ಬದಲಾಗಿ, ಖುದ್ದು ಅವರಾಗಿಯೇ ರಾಜೀನಾಮೆ ನೀಡಿ, ಹೊರ ಹೋಗಲು ಅವಕಾಶ ಮಾಡಿಕೊಡುವ ಪ್ರಯತ್ನಗಳಾಗುತಿವೆ. ಈ ನಿಟ್ಟಿನಲ್ಲಿ ಸಚಿವರ ಮನವಲಿಕೆ ಪ್ರಯತ್ನಗಳು ನಡೆದಿವೆ.

ಮತ್ತೊಂದೆಡೆ ಡಿ.ಕೆ.ಶಿವಕುಮಾರ್ ವಿರುದ್ಧ ಒಳಗೊಳಗೆ ಮಸಲತ್ತುಗಳು ನಡೆಯುತ್ತಿದ್ದು, ಶಿಸ್ತು, ಪಕ್ಷ ವಿರೋಧಿ ಚಟುವಟಿಕೆ ಹೆಸರಿನಲ್ಲಿ ಡಿ.ಕೆ.ಶಿವಕುಮಾರ್ ಅವರು ಪ್ರಮುಖ ನಾಯಕರನ್ನು ಪದಚ್ಯುತಗೊಳಿಸುತ್ತಿದ್ದಾರೆ. ಆದರೆ ಅವರು ಮಾಡಿದ್ದು, ಅಶಿಸ್ತಲ್ಲವೇ ಎಂದು ಕೆ.ಎನ್.ರಾಜಣ್ಣ ಗುಡುಗಿದ್ದಾರೆ.

ರಾಹುಲ್‌ಗಾಂಧಿ ಯಾರೆಂದು ತಮಗೆ ಗೊತ್ತಿಲ್ಲ ಎಂದು ಹೇಳಿಕೆ ನೀಡಿದ ಸದ್ಗುರು ಜೊತೆ ಡಿ.ಕೆ.ಶಿವಕುಮಾರ್ ವೇದಿಕೆ ಹಂಚಿಕೊಂಡಿದ್ದು ಅಶಿಸ್ತಲ್ಲವೇ? ಎಂದು ಕೆ.ಎನ್.ರಾಜಣ್ಣ ಪ್ರಶ್ನಿಸಿದ್ದಾರೆ. 2ನೇಪುಟಕ್ಕೆ►

## ಜೆಡಿಎಸ್ ತಾಲೂಕು ಪರಿಶಿಷ್ಟ ಜಾತಿ ಘಟಕದ ನೂತನ ತಾಲೂಕು ಅಧ್ಯಕ್ಷರಾಗಿ ಸಂಪತಕುಮಾರ ಜಾಗೀರಪನ್ನೂರ್ ಆಯ್ಕೆ

ಧೈರ್ಯದ ದಾರಿ



**ಮಾನ್ವಿ:** ತಾಲೂಕು ಜನತಾದಳ ಜಾತ್ಯತೀತ ಪಕ್ಷ ಮಾನ್ವಿ ತಾಲೂಕು ಘಟಕದ ನೂತನ ಪರಿಶಿಷ್ಟ ಜಾತಿ ಘಟಕದ ತಾಲೂಕು ಅಧ್ಯಕ್ಷರನ್ನಾಗಿ ಸಂಪತಕುಮಾರ ಜಾಗೀರಪನ್ನೂರ್ ರವರನ್ನು ಜನತಾದಳ ಪಕ್ಷದ ತಾಲೂಕು ಅಧ್ಯಕ್ಷರಾದ ಈರಣ್ಣ ಮರ್ಲಟ್ಟಿ ಪೋತ್ನಾಳ್ ರವರು ಆಯ್ಕೆ ಗೊಳಿಸಿ ತಾಲೂಕಿನಲ್ಲಿ ಜನತಾದಳ ಪಕ್ಷವನ್ನು ಸಂಘಟಿಸುವಂತೆ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಕನ್ನಡ ಸೇನೆ ತಾಲ್ಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ; ಅಧ್ಯಕ್ಷರಾಗಿ ಮೌನೇಶ್ ಪಿತಗಲ್ ನೇಮಕ




ಧೈರ್ಯದ ದಾರಿ

**ಸಿರವಾರ:** ಸ್ಥಳೀಯ ಪ್ರವಾಸಿ ಮಂದಿರದಲ್ಲಿ ನಡೆದ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ತಾಲ್ಲೂಕು ಮಟ್ಟದ ಸಭೆಯಲ್ಲಿ ಸಿರವಾರ ತಾಲ್ಲೂಕು ಘಟಕದ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಕನ್ನಡ ಸೇನೆಯ ಜಿಲ್ಲಾಧ್ಯಕ್ಷರಾದ ಎಂ. ಬಸವರಾಜ್ ಮರಕಂದಿನ್ನಿ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ, ತಾಲ್ಲೂಕಿನಲ್ಲಿ ಸಂಘಟನೆಯನ್ನು ಬಲಪಡಿಸುವ ಮತ್ತು ಕನ್ನಡದ ಪರವಾದ ಹೋರಾಟಗಳನ್ನು ಚುರುಕುಗೊಳಿಸುವ ಉದ್ದೇಶದಿಂದ ಪದಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ನಡೆಸಲಾಯಿತು.

ನೂತನ ಪದಾಧಿಕಾರಿಗಳ ಪಟ್ಟಿ:
ತಾಲ್ಲೂಕು ಅಧ್ಯಕ್ಷರು: ಮೌನೇಶ್ ಪಿತಗಲ್
ಗೌರವಾಧ್ಯಕ್ಷರು: ಸತ್ತರ್ಸಾಬ್ ಗುತ್ತೇದಾರ್
ಕಾನೂನು ಸಲಹೆಗಾರರು: ರಾಜ್ ಮೊಹಮ್ಮದ್ ಸಿದ್ದಿಕಿ (ವಕೀಲರು)
ತಾಲ್ಲೂಕು ಕಾರ್ಯಾಧ್ಯಕ್ಷರು: ರಾಮು ಗಿಂಡಿ
ತಾಲ್ಲೂಕು ಸಂಚಾಲಕರು: ಚಂದ್ರಶೇಖರ್ ಹಡಪದ್
ಉಪಾಧ್ಯಕ್ಷರು: ಯೇಸು ಮಿತ್ರ ಮಚ್ಚಿ
ಪ್ರಧಾನ ಕಾರ್ಯದರ್ಶಿ: ರಾಜ್ ಮಹಮ್ಮದ್
ಖಜಾಂಚಿ: ರಾಜು ಭುವಿ
ತಾಲ್ಲೂಕು ಸಲಹೆಗಾರರು: ಇಸ್ಮಾಯಿಲ್
ಮಾಧ್ಯಮ ಸಲಹೆಗಾರರು: ಹನುಮೇಶ್ ಸಿ.
ಸಂಘಟನಾ ಕಾರ್ಯದರ್ಶಿ: ಅಮರೇಶ್ ಕನಸಾವಿ
ಜಂಟಿ ಕಾರ್ಯದರ್ಶಿ: ಜಮೀರ್ ಅಲಿ ಅತನೂರ್

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷರಾದ ಹನುಮೇಶ್ ಮೇಟಿ, ಜಿಲ್ಲಾ ಮುಖಂಡರಾದ ಅಮರೇಶ್ ನಾಯಕ್, ವೆಂಕಟೇಶ್ ಪೂಜಾರಿ ಬುದ್ದಿನ್ನಿ, ನಿತ್ಯಾನಂದ ಸ್ವಾಮಿ ಮಲ್ಲಾಪುರ್, ಸತೀಶ್ ಕುಮಾರ್ ಹಾಗೂ ಅಮರೇಶ್ ಜಕ್ಕಲದಿನ್ನಿ ಉಪಸ್ಥಿತರಿದ್ದರು. ರೈತ ಮುಖಂಡ ಅನೋಕ ಬಡ್ಡಿ ಸೇರಿದಂತೆ ನೂರಾರು ಕನ್ನಡ ಅಭಿಮಾನಿಗಳು ಮತ್ತು ಸಂಘಟನೆಯ ಕಾರ್ಯಕರ್ತರು ಪಾಲ್ಗೊಂಡು ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ಮೌನೇಶ್ ಪಿತಗಲ್, "ನನ್ನ ಮೇಲೆ ವಿಶ್ವಾಸವಿಟ್ಟು ನೀಡಿದ ಈ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತೇನೆ. ತಾಲ್ಲೂಕಿನಲ್ಲಿ ಕನ್ನಡ ನೆಲ, ಜಲ ಮತ್ತು ಭಾಷೆಯ ರಕ್ಷಣೆಗಾಗಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸಿ, ಜನಪರ ಹೋರಾಟಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲಾಗುವುದು," ಎಂದು ತಿಳಿಸಿದರು.

## ಪಿಕಾರ್ಡ್ ಬ್ಯಾಂಕಿನ ಚುನಾವಣೆ ಪ್ರಕ್ರಿಯೆಗೆ ಕಲಬುರಗಿ ಪೀಠದಿಂದ ತಡೆಯಾಜ್ಞೆ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ. ಮಾನ್ವಿ ಸಹಕಾರ ಸಂಘದ ಕಚೇರಿಯಲ್ಲಿ ಏ.7 ರ ಚುನಾವಣೆ ಪ್ರಕ್ರಿಯೆಯನ್ನು ಸ್ಥಗಿತ ಗೊಳಿಸುವಂತೆ ಉಚ್ಚನ್ಯಾಯಾಲಯ ಕಲಬುರಗಿ ಪೀಠವು ನೀಡಿದ ತಡೆಯಾಜ್ಞೆಯನ್ನು ಚುನಾವಣಾಧಿಕಾರಿಗಳಿಗೆ ಪಿಕಾರ್ಡ್ ಬ್ಯಾಂಕಿನ ಅಧಿಕಾರಿಗಳ ಮೂಲಕ ತಲುಪಿಸಿ ಅರ್ಜಿದಾರರ ಪರ ವಕೀಲರಾದ ವಿಶ್ವನಾಥ ರಾಯಪ್ಪ ಮಾತನಾಡಿ ಪಿಕಾರ್ಡ್ ಬ್ಯಾಂಕಿನ 2025-26 ನೇ ಸಾಲಿನ ಆಡಳಿತ ಮಂಡಳಿಯ ನಿರ್ದೇಶಕರ ಮುಂದುವರೆದ ಚುನಾವಣಾವೇಳಾ ಪಟ್ಟಿ ಏ.7 ರ ಚುನಾವಣೆ ಪ್ರಕ್ರಿಯೆಯಲ್ಲಿ ಮತದಾರರ ಪಟ್ಟಿ ಸೇರಿದಂತೆ ವಿವಿಧ ಲೋಪದೋಷಗಳ ವಿರುದ್ಧ ಉಚ್ಚನ್ಯಾಯಾಲಯ ಕಲಬುರಗಿ ಪೀಠಕ್ಕೆ ಅರ್ಜಿದಾರರಾದ ಜೆ.ಸುದಾಕರ್ ಹಾಗೂ ಇತರರು ಮನವಿ ಸಲ್ಲಿಸಿರುವುದನ್ನು ಪರಿಗಣಿಸಿ ಉಚ್ಚನ್ಯಾಯಾಲಯ ಕಲಬುರಗಿ ಪೀಠವು ಏ.7 ರ ಚುನಾವಣೆ ಪ್ರಕ್ರಿಯೆಯನ್ನು



ಸ್ಥಗಿತ ಗೊಳಿಸುವಂತೆ ತಡೆಯಾಜ್ಞೆಯನ್ನು ನೀಡಿದು ನ್ಯಾಯಾಲಯದ ಆದೇಶ ಪ್ರತಿಯನ್ನು ಇಂದು ಬ್ಯಾಂಕಿನ ಅಧಿಕಾರಿಗಳಿಗೆ ಸಲ್ಲಿಸಲಾಯಿತು ಎಂದು ತಿಳಿಸಿದರು.

## ಲೊಯೋಲ ಕಾಲೇಜಿನಲ್ಲಿ ರಾಷ್ಟ್ರೀಯ ಅಗ್ನಿಶಾಮಕ ಸೇವಾ ಸಪ್ತಾಹ ದಿನಾಚರಣೆ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಲೊಯೋಲ ಶಿಕ್ಷಣ ಸಂಸ್ಥೆಯ ಕಾಲೇಜಿನ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ಲೊಯೋಲ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಅಗ್ನಿಶಾಮಕ ಸೇವಾ ಸಪ್ತಾಹ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ರಾಯಚೂರು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರವೀಂದ್ರ ಎ. ಘಾಟಿಗೆ ಮಾತನಾಡಿ ಸಾರ್ವಜನಿಕರಲ್ಲಿ ಅಗ್ನಿ ಅವಘಡಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ತುರ್ತು ಸಂದರ್ಭಗಳಲ್ಲಿ ಹೇಗೆ ಪ್ರತಿಕ್ರಿಯಿಸಬೇಕು ಎನ್ನುವುದರ ಕುರಿತು ಜಾಗೃತಿ ಮೂಡಿಸುವುದಕ್ಕಾಗಿ ಪ್ರತಿ ವರ್ಷ ಏಪ್ರಿಲ್ ತಿಂಗಳಲ್ಲಿ ರಾಷ್ಟ್ರೀಯ ಅಗ್ನಿಶಾಮಕ ಸೇವಾ ಸಪ್ತಾಹ ದಿನಾಚರಣೆ ಕಾರ್ಯಕ್ರಮವನ್ನು ಇಲಾಖೆಯಿಂದ ಹಮ್ಮಿಕೊಳ್ಳಲಾಗುತ್ತದೆ.

ವಿದ್ಯುತ್ ಉಪಕರಣಗಳ ಬಳಕೆ ಮತ್ತು ಬೆಂಕಿಯ ವಿಷಯದಲ್ಲಿ ಹೆಚ್ಚಿನ ಜಾಗೃತಿ ವಹಿಸದೆ ಇರುವುದರಿಂದ ಹೆಚ್ಚಿನ ಅಗ್ನಿ ಅನಾಹುತಗಳು ಸಂಭವಿಸುತ್ತವೆ.ಆದ್ದರಿಂದ ಮನೆಯಿಂದ ಹೊರಹೋಗುವಾಗ ಅನಗತ್ಯ ಸ್ವಿಚ್‌ಗಳನ್ನು ಆಫ್ ಮಾಡಿ. ಎಲ್.ಪಿ.ಜಿ ಗ್ಯಾಸ್ ಸೋರಿಕೆಯಾಗುತ್ತಿದ್ದರೆ ತಕ್ಷಣ ರೆಗ್ಯುಲೇಟರ್ ಆಫ್ ಮಾಡಿ ಕಿಟಕಿ,ಬಾಗಿಲುಗಳನ್ನು ತೆರೆಯಿರಿ. ಬಿಸಿಲು ಹೆಚ್ಚಿರುವ ಜಿಲ್ಲೆಗಳಲ್ಲಿ ಒಣ ಕಸ ಅಥವಾ ಹುಲ್ಲಿನ ಬಣವೆಗಳ ಬಳಿ ಬೆಂಕಿ ಹಚ್ಚುವಾಗ ಹೆಚ್ಚಿನ ನಿಗಾವಹಿಸಬೇಕು. ಅಗ್ನಿ ಅವಘಡ ಸಂಭವಿಸಿದ ಮೊದಲ ಕೆಲವೇ ನಿಮಿಷಗಳು ಅತ್ಯಂತ ನಿರ್ಣಾಯಕವಾಗಿರುವುದರಿಂದ ಈ ಸಮಯವನ್ನು ಬಂಗಾರದ ಸಮಯ ಎಂದು ಕರೆಯಲಾಗುತ್ತದೆ ಈ ಸಮಯದಲ್ಲಿ ಬೆಂಕಿ ಹರಡದಂತೆ ಸೂಕ್ತ ಕ್ರಮವನ್ನು ಕೈಗೊಂಡಲ್ಲಿ ಅಮೂಲ್ಯವಾದ ಜೀವ ಮತ್ತು ಆಸ್ತಿ ಹಾನಿಯನ್ನು ತಡೆಗಟ್ಟಬಹುದು ಸುರಕ್ಷತೆ ಎನ್ನುವುದು ಕೇವಲ ಅಗ್ನಿಶಾಮಕ ದಳದ ಜವಾಬ್ದಾರಿಯಲ್ಲ, ಅದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಲೊಯೋಲ ಪದವಿ ಕಾಲೇಜಿನ ಪ್ರಾಂಶುಪಾಲರಾದ ಫಾ. ವಿನೋದ್ ಪೌಲ್ ಮಾತನಾಡಿ, ಮುಂಜಾಗ್ರತೆಯೇ ಅಗ್ನಿ ಸುರಕ್ಷತೆಯ ಮೊದಲ ಮೆಟ್ಟಿಲಾಗಿರುವುದರಿಂದ ಅಗ್ನಿ ಅನಾಹುತ ಸಮಯದಲ್ಲಿ ಪ್ರತಿಯೊಬ್ಬರು ಕೂಡ ಜಾಗೃತರಾಗಿರಬೇಕು ಎಂದು ತಿಳಿಸಿದರು.

ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರವೀಂದ್ರ ಎ. ಘಾಟಿಗೆ , ಮಾನ್ವಿ ಪಟ್ಟಣದ ಅಗ್ನಿಶಾಮಕ ಇಲಾಖೆಯ ಠಾಣಾಧಿಕಾರಿಗಳಾದ ರಂಗಪ್ಪ, ಮಾನ್ವಿಯ ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿಗಳಾದ ಹಾಜಿಮಿಯಾ ನೇತೃತ್ವದಲ್ಲಿ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳು ಮಾಕ್ ಡ್ರಿಲ್ ಮೂಲಕ ವಿದ್ಯಾರ್ಥಿಗಳಿಗೆ ತುರ್ತು ಸಂದರ್ಭಗಳಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಹಾಗೂ ಗ್ಯಾಸ್ ಸಿಲೇಂಡರ್‌ಗೆ ಬೆಂಕಿ ಬಿದ್ದಾಗ ಕೈಗೊಳ್ಳಬೇಕಾದ ಸುರಕ್ಷ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಲೊಯೋಲ ಕಾಲೇಜಿನ ಉಪಪ್ರಾಂಶುಪಾಲರಾದ ಖಾಸಿಂ ಸಾಬ್ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಪ್ರಶಿಕ್ಷಣಾರ್ಥಿಗಳು ಶಿಕ್ಷಕರ ಮಾರ್ಗದರ್ಶನದಿಂದ ಭಾವಿ ಶಿಕ್ಷಕರಾಗಿ : ಎಸ್ ಎಸ್ ಪಾಟೀಲ್




ಧೈರ್ಯದ ದಾರಿ

**ಮಾನ್ವಿ:** ಪ್ರಶಿಕ್ಷಣಾರ್ಥಿಗಳು ಶಿಕ್ಷಕರ ಮಾರ್ಗದರ್ಶನದಿಂದ ಭಾವಿ ಶಿಕ್ಷಕರಾಗಿ ಎಂದು ಎಸ್ ಎಸ್ ಪಾಟೀಲ್ ಹೇಳಿದರು.ಪಟ್ಟಣದ ಶಾರದಾ ವಿದ್ಯಾನಿಕೇತನ ಡಿಎಡ್ ಕಾಲೇಜಿನಲ್ಲಿ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳಿಂದ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಿಗೆ ಬಿಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿಎಸ್ ಎಸ್ ಪಾಟೀಲ್ ಪ್ರಾಚಾರ್ಯರು ಕಲ್ಮಠ ಪದವಿ ಪೂರ್ವ ಕಾಲೇಜು ಇವರು ಪ್ರಶಕ್ಷಣಾರ್ಥಿಗಳನ್ನು ಕುರಿತು ಮಾತನಾಡುತ್ತಾ ಪ್ರಶಿಕ್ಷಣಾರ್ಥಿಗಳು ತಮ್ಮ ಸತತ ಪ್ರಯತ್ನದ ಮೂಲಕ ಮತ್ತು ಶಿಕ್ಷಕರ ಸೂಕ್ತ ಮಾರ್ಗದರ್ಶನದ ಮೂಲಕ ಭವಿಷ್ಯದಲ್ಲಿ ಉತ್ತಮ ಶಿಕ್ಷಕರಾಗಬಹುದು ಎನ್ನುವಂತ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.ಈ ಕಾರ್ಯಕ್ರಮವನ್ನು ಉದ್ಘಾಟಿಸಿದಂತಹ ಶಾರದಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾಕ್ಟರ್ ಹೈಂದವಿ ಉದ್ಘಾಟನಾ ನುಡಿಯನ್ನು ನುಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದಂತ ಡಿಎಡ್ ಕಾಲೇಜಿನ ಪ್ರಾಚಾರ್ಯ ರಾದ ಹನುಮಂತಗೌಡ ಅವರು ಪ್ರಶಿಕ್ಷಣಾರ್ಥಿಗಳಿಗೆ ಮುಂದಿನ ದಿನಗಳಲ್ಲಿ ಉತ್ತಮ ಭವಿಷ್ಯವಿದೆ ತಾವೆಲ್ಲರೂ ಪ್ರಯತ್ನದ ಮೂಲಕ ಅವಕಾಶಗಳನ್ನ ಸದುಪಯೋಗಪಡಿಸಿಕೊಳ್ಳಿ ಎಂದು ತಿಳಿಸಿದರು ಈ ಕಾರ್ಯಕ್ರಮದಲ್ಲಿ ಡಿಎಡ್ ಕಾಲೇಜಿನ ಉಪನ್ಯಾಸಕರಾದ ಹನುಮಂತಪ್ಪ ಹರಿವಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು ಈ ಕಾರ್ಯಕ್ರಮದಲ್ಲಿ ಶಾರದಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಉಮಾಮಹೇಶ್ವರಿ, ಶಾರದಾ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಬಿ ಕಿಶೋರ್ ಕುಮಾರ್.ಮಂಜುಳಾ ಕಿಶೋರ್ ಕುಮಾರ್ ಬಿ ಇಡಿ ಕಾಲೇಜಿನ ಪ್ರಾಚಾರ್ಯರಾದ ಡಾ.ಪರಮೇಶ್ವರಪ್ಪ ಗೋಪಾಶೆಟ್ಟಿ ಹಾಗೂ ಕಾಲೇಜಿನ ಎಲ್ಲಾ ಉಪನ್ಯಾಸಕರು ಪಾಲ್ಗೊಂಡಿದ್ದರು ಈ ಕಾರ್ಯಕ್ರಮವನ್ನು ಪ್ರಥಮ ವರ್ಷದ ಪ್ರಶಕ್ಷಣಾರ್ಥಿಯಾದ ರತ್ನ ನಿರೂಪಿಸಿದರು ಮೌನೇಶ್ ಸ್ವಾಗತಿಸಿದರು ಶ್ರೀದೇವ ವಂದಿಸಿದರು.

ಮೊದಲನೇ ಪುಟದಿಂದ

# ಜಮೀರ್ ಗೌರವಯುತ ವಿದಾಯಕ್ಕೆ ಕಾಂಗ್ರೆಸ್‌ನಲ್ಲಿ ತೆರೆಮರೆಯ ಕಸರತ್ತು

ಸಚಿವ ಜಮೀರ್ ಅಹಮದ್ ಖಾನ್ ಕೂಡ ತಮನ್ನು ಗುರಿಯಾಗಿಸಿ ಸಂಚು ನಡೆಯುತ್ತಿದೆ ಎಂದು ಹೇಳಿಕೊಂಡಿದ್ದಾರೆ. ಜಮೀರ್ ಅವರನ್ನು ಏಕಾಏಕಿ ಸಂಪುಟದಿಂದ ಉಚ್ಚಾಟನೆ ಮಾಡಿದರೆ, ಅದರ ಪರಿಣಾಮ ಕೆಟ್ಟದ್ದಾಗಿರಬಹುದು ಎಂಬ ಕಾರಣಕ್ಕೆ ಕಾಂಗ್ರೆಸ್‌ನಲ್ಲಿ ಅಸಹನೆಯ ಮಂತ್ರ ಜಪಿಸಲಾಗುತ್ತಿದೆ.

ವಿಧಾನಸಭೆಯ ಫಲಿತಾಂಶ ಪ್ರಕಟಗೊಂಡ ಬಳಿಕ ಒಂದು ವೇಳೆ ಕಾಂಗ್ರೆಸ್ ಪಕ್ಷಕ್ಕೆ ಹಿನ್ನಡೆಯಾದರೆ, ಅದಕ್ಕೆ ಜಮೀರ್ ಅಹಮದ್ ಖಾನ್ ಅವರನ್ನೆ? ಹೊಣೆ ಮಾಡಲು ವೇದಿಕೆ ಸಿದ್ಧಗೊಂಡಿದೆ. ಆದರೆ ಜಮೀರ್ ಜಿದ್ದಿಗೆ ಬಿದ್ದಿದ್ದು, ತಾವು ರಾಜೀನಾಮೆ ನೀಡುವುದಿಲ್ಲ, ಬೇಕಾದರೆ ವಜಾಗೊಳಿಸಲಿ ಎಂದು ಸವಾಲು ಒಡ್ಡುವ ರೀತಿ ನಿಂತಿದ್ದಾರೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರ ನಿರ್ದೇಶನದ ಮೇರೆಗೆ ತಾವು ಕೇರಳದ 7 ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಿದ್ದು, ಪಕ್ಷ ಕೊಟ್ಟ ಜವಾಬ್ದಾರಿಯನ್ನು ನಿಭಾಯಿಸಿದ್ದೇನೆ. ಹೀಗಿರುವಾಗ ತಮ ವಿರುದ್ಧ ಕ್ರಮ ಕೈಗೊಳ್ಳುವುದು ಸರಿಯಲ್ಲ ಎಂದು ಜಮೀರ್ ವಾದಿಸಿದ್ದಾರೆ.ನಜೀರ್ ಅಹಮದ್ ಮತ್ತು ಅಬ್ದುಲ್ ಜಬ್ಬಾರ್ ಅವರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳು ಕೂಡ ಅವೈಜ್ಞಾನಿಕ ಎಂದು ಜಮೀರ್ ವಾದಿಸಿದ್ದಾರೆ.

# ರಸಗೊಬ್ಬರ, ಬೀಜ ಕೊರತೆ ಆಗದಂತೆ ನಿಗಾವಹಿಸಲು ಸೂಚನೆ



**ಬೆಳಗಾವಿ, ಏ.16:** ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಆಗದಂತೆ ನಿಗಾವಹಿಸುವುದರ ಜೊತೆಗೆ ಸಾಧ್ಯವಾದಷ್ಟು ರಸಗೊಬ್ಬರಗಳ ಬಳಕೆ ಕಡಿಮೆ ಮಾಡುವಂತೆ ರೈತರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಸಮರ್ಪಕ ಪೂರೈಕೆ ಹಾಗೂ ಭೂ ತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಬಾರಿ ಜಿಲ್ಲೆಯಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ತೊಂದರೆ ಆಗಿರುವುದಿಲ್ಲ ಈ ಬಾರಿಯು ಸಹ ಅದೇ ರೀತಿ ಪೂರೈಕೆಗೆ ಕ್ರಮ ವಹಿಸಬೇಕು. ಕಳೆದ ಬಾರಿ ಜಿಲ್ಲೆಯಲ್ಲಿ ರಸಗೊಬ್ಬರ ಬಳಕೆಯಲ್ಲಿ ಕಡಿಮೆ ಆಗಿದ್ದು, ಈ ಬಾರಿಯು ಅಧಿಕಾರಿಗಳು, ರಸಗೊಬ್ಬರ ಪೂರೈಕೆದಾರರು ಸಮನ್ವಯ ಸಾಧಿಸಿ ರೈತರಲ್ಲಿ ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಲು ಜಾಗೃತಿ ಮೂಡಿಸಬೇಕು ಎಂದರು.

ರಸಗೊಬ್ಬರ ಮಾರಾಟದಲ್ಲಿ ಕೃತಕ ಅಭಾವ, ಕಾಳಸಂತೆಯಲ್ಲಿ ಮಾರಾಟ ಮಾಡಬಾರದು. ಕಳೆದ ಬಾರಿ ಕೆಲ ಸ್ಥಳಗಳಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರ ಕುರಿತು ದೂರುಗಳು ಬಂದಿದ್ದು ಈ ಬಾರಿ ಆ ರೀತಿ ಆಗದಂತೆ ನಿಗಾವಹಿಸಲು ತಿಳಿಸಿದರು.

ರಸಗೊಬ್ಬರ ದಾಸ್ತಾನು ಕುರಿತು ರೈತರಿಗೆ ಸರಿಯಾದ ಮಾಹಿತಿ ಒದಗಿಸಬೇಕು. ರೈತರಲ್ಲಿ ವಿನಾಕಾರಣ ಆತಂಕ ಮೂಡಿಸದೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಆಗದಂತೆ ನೋಡೊಕೊಳ್ಳಲು ಸೂಚಿಸಿದರು.

ಇಲಾಖೆ ವತಿಯಿಂದ ರೈತರಿಗೆ ಎಲ್ಲ ರೀತಿಯ ಮಾಹಿತಿ ವಿನಿಮಯ ಮಾಡಬೇಕು. ರೈತ ಸಂಘಟನೆಗಳೊಂದಿಗೆ ನಿಯಮಿತವಾಗಿ ಸಭೆ ಜರುಗಿಸಿ ಪರಿಸ್ಥಿತಿಯ ವಿವರಗಳನ್ನು ಒದಗಿಸಲು ತಿಳಿಸಿದರು.

ಜಿಲ್ಲೆಗೆ ಬೇಕಾದಂತಹ ರಸಗೊಬ್ಬರ ತರಲು ಇಲಾಖೆಯ ಜೊತೆಗೆ ಪೂರೈಕೆದಾರರು ಪ್ರಯತ್ನಿಸಬೇಕು. ಜಿಲ್ಲೆಯ ಎಲಲ ರಸಗೊಬ್ಬರ ಅಂಗಡಿಗಳ ದಾಸ್ತಾನಿನ ವಿವರ ಲಭ್ಯವಿದ್ದು, ರಸಗೊಬ್ಬರ ಪೂರೈಕೆಗೆ ಸಂಬಂಧಿಸಿದಂತೆ ಪೂರೈಕೆದಾರರು ಆವಕ ಜಾವಕ ಮಾಹಿತಿಯನ್ನು ಪ್ರತಿದಿನ ಕಡ್ಡಾಯವಾಗಿ ನಮೂದಿಸಬೇಕು.

ಅತಿಯಾದ ರಸಗೊಬ್ಬರ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ರೈತರಿಗೆ ತಿಳಿ ಹೇಳುವ ಮೂಲಕ ಮಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಮನವರಿಕೆ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ಮಾತನಾಡಿ, ರೈತರು ಜಮೀನಿನಲ್ಲಿ ಯಾವ ಬೆಳೆ ಬೆಳೆಯಬೇಕು ಎನ್ನುವುದನ್ನು ರಸಗೊಬ್ಬರ ಅಂಗಡಿಗಳಿಗೆ ಭೇಟಿ ನೀಡುವಂತಹ ಸಂದರ್ಭದಲ್ಲಿ ಪೂರೈಕೆದಾರರು ರೈತರಿಗೆ ಉತ್ತಮ ಮಾರ್ಗದರ್ಶನ ನೀಡಬೇಕು. ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆ ಇರುವುದಿಲ್ಲ. ರಸಗೊಬ್ಬರ, ಬಿತ್ತನೆ ಬೀಜಗಳ ಕೃತಕ ಅಭಾವ ಅಥವಾ ಹೆಚ್ಚಿನ ದರಕ್ಕೆ ಮಾರಾಟ ಮಾಡಬಾರದು ಎಂದು ಹೇಳಿದರು.

ಸಾವಯವ ಕೃಷಿಗೆ ಒತ್ತು ನೀಡಲು ಇದು ಉತ್ತಮ ಸಮಯವಾಗಿದ್ದು ಕೃಷಿ ಇಲಾಖೆ ಹಾಗೂ ರಸಗೊಬ್ಬರ, ಬಿತ್ತನೆ ಬೀಜ ಪೂರೈಕೆದಾರರು ರೈತರಲ್ಲಿ ಅರಿವು ಮೂಡಿಸಬೇಕು.

ರಸಗೊಬ್ಬರ ಮಾರಾಟಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಬೇಕು. ರಸಗೊಬ್ಬರ ಮಾರಾಟಕ್ಕೆ ಸಂಬಂಧಿಸಿದಂತೆ ತೆರಿಗೆ ಇಲಾಖೆ, ವೀಚಕ್ಷಣಾ ತಂಡಗಳು ನಿರಂತರವಾಗಿ ನಿಗಾ ವಹಿಸುತ್ತಿದ್ದು ದಾಸ್ತಾನು ಹಾಗೂ ಮಾರಾಟದಲ್ಲಿ ಯಾವುದೆ ರೀತಿಯ ಸಮಸ್ಯೆಗಳಾಗದಂತೆ ನಿಗಾವಹಿಸಲು ಜಿಲ್ಲಾಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ? ಶಿಂಧೆ ಅವರು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕರಾದ ಎಚ್.ಡಿ.ಕೋಳೆಕರ ಅವರು ಮಾತನಾಡಿ, ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗೆ ಬೇಕಾದಂತಹ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಸಮರ್ಪಕ ದಾಸ್ತಾನು ಹೊಂದಿದ್ದು ರಸಗೊಬ್ಬರ ಪೂರೈಕೆಮಾಡುವ ಸಂಸ್ಥೆಗಳ ಪ್ರತಿನಿಧಿ ಹಾಗೂ ಸಾಗಾಣಿಕೆ ಸಂಸ್ಥೆಯವರೊಂದಿಗೆ ಸಭೆ ಜರುಗಿಸಲಾಗಿರುತ್ತದೆ ಎಂದರು.

ಜಿಲ್ಲಾ ಮಟ್ಟದಲ್ಲಿ 10 ಜನ ಹಿರಿಯ ಅಧಿಕಾರಿಗಳನ್ನೊಳಗೊಂಡ ರಸಗೊಬ್ಬರ ಮೇಲ್ವಿಚಾರಣೆ ಕೋಶವನ್ನು ರಚಿಸಿ ಮೇಲ್ವಿಚಾರಣೆ ಮಾಡಲು ಕ್ರಮವಹಿಸಲಾಗಿದ್ದು ಕೃಷಿಯೇತರ ಚಟುವಟಿಕೆಗಳಿಗೆ ಯೂರಿಯಾ ರಸಗೊಬ್ಬರ ಬಳಕೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಮಹಾಂತೇಶ ಮುರಗೋಡ, ಕೃಷಿ ಅಧಿಕಾರಿಗಳು, ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರು, ರಸಗೊಬ್ಬರ, ಬಿತ್ತನೆ ಬೀಜ ಪೂರೈಕೆದಾರರು ಉಪಸ್ಥಿತರಿದ್ದರು.

# ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ: ಆರೋಪಿಗೆ 20 ವರ್ಷ ಜೈಲು ಶಿಕ್ಷೆ

**ಕಲಬುರಗಿ,ಏ.16**–ಅಪ್ರಾಪ್ತ ವಯಸ್ಸಿನ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ ಆರೋಪಿಗೆ ಇಲ್ಲಿನ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೊಕ್ಸೋ) ನ್ಯಾಯಾಲಯ 20 ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 1.25 ಲಕ್ಷ ರೂ.ದಂಡ ವಿಧಿಸಿದೆ.
ನಾಗೇಶ ಅಲಿಯಾಸ್ ಸಂಜು ತಂದೆ ಲಾಲಸಾಬ ಬಂದರವಾಡ ಅಲಿಯಾಸ್ ಕೋಲೆಕರ್ (23) ಶಿಕ್ಷೆಗೆ ಗುರಿಯಾದ ಆರೋಪಿ. 2024ರಲ್ಲಿ ಆರೋಪಿ ಬಾಲಕಿಗೆ ಪ್ರೀತಿಸುವುದಾಗಿ ಮತ್ತು ಮದುವೆಯಾಗುವುದಾಗಿ ನಂಬಿಸಿ ಬೆಂಗಳೂರಿಗೆ ಕರೆದೊಯ್ದು ಆಕೆಯ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ್ದ. ಈ ಬಗ್ಗೆ ಯಡ್ರಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸಿಪಿಐ ರಾಜೇಸಹೇಬ್ ನದಾಫ್ ಅವರು ತನಿಖೆ ನಡೆಸಿ ಪೊಕ್ಸೋ ಕಾಯ್ದೆಯಡಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.ಪ್ರಕರಣದ ವಿಚಾರಣೆ ನಡೆಸಿದ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೊಕ್ಸೋ) ನ್ಯಾಯಾಲಯದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಸಿ.ಜಿ.ಅವರು ಆರೋಪಿಗೆ 20 ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 1.25 ಲಕ್ಷ ದಂಡ ವಿಧಿಸಿ ತೀರ್ಪು ನೀಡಿದ್ದಾರೆ.ಕಾನೂನು ಪ್ರಾಧಿಕಾರದ ವತಿಯಿಂದ ತೀರ್ಪಿನ ದಿನಾಂಕದಿಂದ 1 ತಿಂಗಳ ಅವಧಿಯೊಳಗೆ ನೊಂದ ಬಾಲಕಿಗೆ 3 ಲಕ್ಷ ಪರಿಹಾರ ನೀಡಬೇಕೆಂದು ನ್ಯಾಯಾಧೀಶರು ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ವಾದ ಮಂಡಿಸಿದ್ದರು.

# ಎಚ್‌ಪಿವಿ ಲಸಿಕೆ ಪಡೆದರೆ ಭವಿಷ್ಯದಲ್ಲಿ ಆರೋಗ್ಯಕ್ಕೆ ಭದ್ರತೆ: ಡಾ.ನಂದಿತಾ



ಧೈರ್ಯದ ದಾರಿ

**ರಾಯಚೂರು :** ಮಹಿಳೆಯರನ್ನು ಕಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವಲ್ಲಿ ಎಚ್‌ಪಿವಿ ಲಸಿಕೆ ಅತ್ಯಂತ ಪರಿಣಾಮಕಾರಿಯಾಗಿದೆ. ಅರ್ಹ ವಯಸ್ಸಿಗೆ ಲಸಿಕೆ ಪಡೆದರೆ ಭವಿಷ್ಯದ ಆರೋಗ್ಯಕ್ಕೆ ಭದ್ರತೆ ಸಿಗುತ್ತದೆ ಎಂದು ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ.ನಂದಿತಾ ಎಮ್.ಎನ್. ಅವರು ಹೇಳಿದರು.

ಇತ್ತೀಚೆಗೆ ಜಿಲ್ಲೆಯ ದೇವದುರ್ಗ ತಾಲೂಕಿನ ಕರಿಗುಡ್ಡ ಸೇರಿದಂತೆ ಗ್ರಾಮೀಣ ಭಾಗದ ವಿವಿಧ ಹಳ್ಳಿಗಳಿಗೆ ಭೇಟಿ ಹೆಚ್‌ಪಿವಿ ಲಸಿಕೆ ಕಾರ್ಯವನ್ನು ಪರಿಶೀಲಿಸಿ, ಅವರು ಮಾತನಾಡಿದರು.

ಈ ಲಸಿಕೆ ಹೊಸದೇನಲ್ಲ, ಜಗತ್ತಿನಾದ್ಯಂತ ಈಗಾಗಲೇ 50 ಕೋಟಿಗೂ ಅಧಿಕ ಲಸಿಕೆಗಳನ್ನು ನೀಡಲಾಗಿದೆ. ಕಳೆದ 15 ವರ್ಷಗಳ ಅಂಕಿ-ಅಂಶಗಳು ಈ ಲಸಿಕೆ ಸುರಕ್ಷಿತ ಮತ್ತು ಪರಿಣಾಮಕಾರಿ ಎಂಬುದನ್ನು ಸಾಬೀತುಪಡಿಸಿವೆ ಎಂದರು.

ಸರ್ಕಾರದ ಮಾರ್ಗಸೂಚಿಯಂತೆ 14 ವರ್ಷ ಪೂರೈಸಿದ ಮತ್ತು 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಉಚಿತವಾಗಿ ಲಸಿಕೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

14 ವರ್ಷದ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ ಲಸಿಕೆಯನ್ನು ಪಾಲಕರು ಯಾವುದೇ ತಪ್ಪು ನಂಬಿಕೆಗಳು, ಸಾಮಾಜಿಕ ಜಾಲತಾಣಗಳಲ್ಲಿ ವೈಜ್ಞಾನಿಕವಾಗಿ ಗೊತ್ತಿಲ್ಲದೆ ಕೆಲವರು ಹರಡುವ ಸುಳ್ಳು ಸುದ್ದಿಗಳನ್ನು ನಂಬದೆ, ಯಾವುದೇ ಹಿಂದೇಟು ಹಾಕದೆ ಭವಿಷ್ಯದಲ್ಲಿ ಹೆಣ್ಣು ಮಕ್ಕಳನ್ನು ಗರ್ಭಕಂಠದ ಕ್ಯಾನ್ಸರ್‌ನಿಂದ ದೂರವಿರಿಸಲು ಎಲ್ಲ ಪಾಲಕರು ಮುಂದೆ ಬರಬೇಕು ಎಂದರು.

ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಹೆಚ್‌ಪಿವಿ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು, ಈಗಾಗಲೆ ಲಸಿಕೆಯನ್ನು ಹಾಕಲಾಗುತ್ತಿದ್ದು, ದಯವಿಟ್ಟು ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆ ಹಾಕಿಸಬೇಕೆಂದರು.

ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ.ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ ಎಂದು ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ದೇವದುರ್ಗ ತಾಲೂಕು ಆರೋಗ್ಯಾಧಿಕಾರಿ ಡಾ.ಬನದೇಶ ಅವರು ಮಾತನಾಡಿ, ಪೋಷಕರು ತಮ್ಮ ಮಕ್ಕಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರವಾಗಲಿ ಅಥವಾ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಲಸಿಕೆ ಹಾಕಿಸುವಂತೆ ಮನವಿ ಮಾಡಿದರು.

ಈ ವೇಳೆ ಲಸಿಕೆ ಹಾಕಿಸಲು ನಿರಾಕರಿಸಿದ್ದ ಕುಟುಂಬಗಳ ಮನೆಗೆ ಅಧಿಕಾರಿಗಳು ಭೇಟಿ ನೀಡಿ ಜಾಗೃತಿ ಮೂಡಿಸಿದರು.

ಭೇಟಿ ವೇಳೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಶಾಂತಮ್ಮ, ಸಮುದಾಯ ಆರೋಗ್ಯ ಅಧಿಕಾರಿ ಪುನೀತ್, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಈರಮ್ಮ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಮ್ಮ, ಸಿಬ್ಬಂದಿಯವರಾದ ಶಾರೋನ, ನರಸಮ್ಮ, ಮನೋಜ್ ಸೇರಿದಂತೆ ಪಿ.ಹೆಚ್.ಸಿ.ಓ, ಆಶಾ ಕಾರ್ಯಕರ್ತೆಯರು ಹಾಗೂ ತಾಯಂದಿರ ಇದ್ದರು.

# ಪೋತ್ನಾಳ್ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅಗತ್ಯ ಆರೋಗ್ಯ ಸೌಲಭ್ಯ ಕಲ್ಪಿಸಿ: ಯಂಕೋಬ ನಾಯಕ್



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿನ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಜನವೇದಿಕೆ ಸಮಿತಿ ವತಿಯಿಂದ ನಮ್ಮ ಆರೋಗ್ಯ ನಮ್ಮ ಹಕ್ಕು ಅಭಿಯಾನದಡಿಯಲ್ಲಿ ಜನಸಂಪರ್ಕ ಸಭೆಯ ಮೂಲಕ ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ರವರಿಗೆ ಜನವೇದಿಕೆ ಸದಸ್ಯರಾದ ಯಂಕೋಬ ನಾಯಕ್ ಮನವಿ ಸಲ್ಲಿಸಿ ಮಾತನಾಡಿ ಪೋತ್ನಾಳ್ ಗ್ರಾಮದಲ್ಲಿನ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸುತ್ತ ತಡೆಗೋಡೆ ,ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮಾಡಬೇಕು , ರಾತ್ರಿ ವೇಳೆ ಕೂಡ ರೋಗಿಗಳಿಗೆ ಚಿಕಿತ್ಸೆ ನೀಡಬೇಕು. ಖಾಲಿ ಇರುವ ವೈದ್ಯರನ್ನು ಹಾಗೂ ಸಿಬ್ಬಂದಿಗಳನ್ನು ನೇಮಕ ಮಾಡಬೇಕು.
ಆಸ್ಪತ್ರೆಯಲ್ಲಿ ರಕ್ತಪರೀಕ್ಷೆ, ಕುಟುಂಬ ನಿಯಂತ್ರಣ ಯೋಜನೆಯ ಶಸ್ತ್ರಚಿಕಿತ್ಸೆಗಳು, ಹೆರಿಗೆಗಳು, ತಪಾಸಣೆಗಳು, 108 ಅಂಬುಲೇನ್ಸ್ ವ್ಯವಸ್ಥೆ , ನಾಯಿ ಕಡಿತಕ್ಕೆ ಸೇರಿದಂತೆ ಅಗತ್ಯ ಔಷಧಿಗಳ ಸಂಗ್ರಹಣೆ ಮಾಡಿ ರೋಗಿಗಳಿಗೆ ನೀಡಬೇಕು, ಶುದ್ದ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವಿಕರಿಸಿ ತಾಲೂಕಾ ವೈದ್ಯಾಧಿಕಾರಿ ಡಾ.ಶರಣಬಸವರಾಜ ಮಾತನಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅಗತ್ಯ ವ್ಯವಸ್ಥೆ ಮಾಡಲಾಗುವುದು ಗುಣಮಟ್ಟದ ಚಿಕಿತ್ಸೆ ನೀಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಬರವಸೆ ನೀಡಿದರು

ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಹನುಮೇಶ ನಾಯ್ಕ ,ಜನವೇದಿಕೆ ಸದಸ್ಯರಾದ ಯಂಕೋಬ ನಾಯಕ್, ಈಶಮ್ಮ, ಸಿದ್ದಲಿಂಗಮ್ಮ, ಹಂಪಯ್ಯ, ದೇವರಾಜ್, ಸುಂಕ್ಲಮ್ಮ, ದೇವರಾಜ ಕೋಟ್ನೇಕಲ್, ಶ್ರೀದೇವಿ, ಸದಾನಂದ, ಜನಜಾಗೃತಿ ರಾಜ್ಯಧ್ಯಕ್ಷರಾದ ಯೇಸಪ್ಪ , ಕರ್ನಾಟಕ ದಲಿತ ಸಂಘಟನೆಯ ಶೀವಜ್ಞಾನಿ , ರೈತ ಮುಖಂಡರಾದ ರಾಜಾಸಾಬ್, ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷರಾದ ಚಿನ್ನಪ್ಪ ಪನ್ನೂರು, ಮಾಜಿ ಗ್ರಾಮಪಂಚಾಯತಿ ಅಧ್ಯಕ್ಷ ಈರಣ್ಣ, ಸೇರಿದಂತೆ ನೂರಾರು ಜನವೇದಿಕೆ ಸದಸ್ಯರು ಭಾಗವಹಿಸಿದರು

# ತರಕಾರಿ ವ್ಯಾಪಾರಿಗಳಿಗೆ ಜಾಗದ ಪತ್ರ ನೀಡಿಕೆ

**ಬಳ್ಳಾರಿ, ಏ.16:** ಸ್ಥಳೀಯ ಪಾರ್ವತಿ ನಗರ ಮುಖ್ಯ ರಸ್ತೆಯಲ್ಲಿರುವ ಜೈಲ್ ಗೋಡೆ ಪಕ್ಕದಲ್ಲಿ.. ತರಕಾರಿ ಮಾರುಕಟ್ಟೆ ಅಂಗಡಿಗಳ ಸಂಖ್ಯೆಗಳನ್ನು.. ವ್ಯಾಪಾರಿಗಳ ಸಮಕ್ಷಮದಲ್ಲಿ ಲಾಟರಿ ಮೂಲಕ.. ಹತ್ತು ಜನ ವ್ಯಾಪಾರಸ್ಥರಿಗೆ.. ಜಾಗಗಳನ್ನು ಗುರುತಿಸಿ ವ್ಯಾಪಾರ ಮಾಡಲು ಪತ್ರವನ್ನು ನೀಡಲಾಯಿತು..
ಈ ಕಾರ್ಯಕ್ರಮದಲ್ಲಿ ನಗರ ಪಾಲಿಕೆ ಮೇಯರ್ ಗಾದೆಪ್ಪ ಹಾಗೂ ಶಾಸಕರಾದ ನಾರಾ ಭರತ್ ರೆಡ್ಡಿ. ಹಾಗೂ ಪಾಲಿಕೆ ಆಯುಕ್ತರು ಹಾಗೂ ಪಾಲಿಕೆ ಸದಸ್ಯರಾದ ಗುಡಿಗಂಟು ಹನುಮಂತು ಕುಬೇರ ಹಾಗೂ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು



# ಸಿಎಂ ಪದಕ ಪುರಸ್ಕೃತ ಇನ್‌ಸ್ಪೆಕ್ಟರ್ ಸುಶೀಲಕುಮಾರ್‌ಗೆ ಸನ್ಮಾನ



**ಕಲಬುರಗಿ:ಏ.16:** ನಗರದ ಚೌಕ್ ಠಾಣೆಯ ಪೊಲೀಸ್ ಇನ್‌ಸ್ಪೆಕ್ಟರ್ ಸುಶೀಲಕುಮಾರ್ ಅವರ ಸೇವಾ ದಕ್ಷತೆ ಹಾಗೂ ಶ್ರೇಷ್ಠ ಕಾರ್ಯಶೈಲಿಯನ್ನು ಮೆಚ್ಚಿ ಮುಖ್ಯಮಂತ್ರಿ ಪದಕ ಪ್ರದಾನಗೊಂಡ ಹಿನ್ನೆಲೆ, ಅವರನ್ನು ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ನಾಗೇಂದ್ರಪ್ಪ ತಂಬೆ ಅವರು ಕಲಬುರಗಿಯಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಾಗೇಂದ್ರಪ್ಪ ತಂಬೆ, ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ. ಅದರಲ್ಲಿ ಸುಶೀಲಕುಮಾರ್ ಅವರಂತಹ ಅಧಿಕಾರಿಗಳು ಉತ್ತಮ ಮಾದರಿಯಾಗಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗುನ್ನಳ್ಳಿ: 18 ರಿಂದ ವೀರಭದ್ರೇಶ್ವರ ಜಾತ್ರೆ



**ಬೀದರ್: ಏ.16:**ತಾಲ್ಲೂಕಿನ ಗುನ್ನಳ್ಳಿ ಗ್ರಾಮದ ವೀರಭದ್ರೇಶ್ವರ ಮಂದಿರದ 13ನೇ ಜಾತ್ರಾ ಮಹೋತ್ಸವ ಏ. 18 ರಿಂದ 20 ರ ವರೆಗೆ ನಡೆಯಲಿದೆ.

18 ರಂದು ಸಂಜೆ 7ಕ್ಕೆ ದೇವಸ್ಥಾನದ ಆವರಣದಲ್ಲಿ ಜಾತ್ರೆ ಉದ್ಘಾಟನೆ ಹಾಗೂ ಧರ್ಮಸಭೆ ನಡೆಯಲಿದೆ ಎಂದು ದೇವಸ್ಥಾನ ಸಮಿತಿಯ ಅಧ್ಯಕ್ಷ ಸುನೀಲಕುಮಾರ ನಾಗಶೆಟ್ಟೆಪ್ಪ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ ಆಶ್ರಮದ ಡಾ. ಬಸವಲಿಂಗ ಅವಧೂತರು ದಿವ್ಯ ಸಾನಿಧ್ಯ, ಲಾಡಗೇರಿ ಮಠದ ಗಂಗಾಧರ ಶಿವಾಚಾರ್ಯ, ಖಟಕಚಿಂಚೋಳಿಯ ಬಸವಲಿಂಗ ದೇವರು ಸಮ್ಮುಖ ವಹಿಸುವರು. ಸಂಸದ ಸಾಗರ್ ಖಂಡ್ರೆ ಉದ್ಘಾಟಿಸುವರು ಎಂದು ಹೇಳಿದ್ದಾರೆ.

ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸುವರು. ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ, ಮಾಜಿ ಶಾಸಕ ಅಶೋಕ ಖೇಣಿ ಹಾಗೂ ಮುಖಂಡ ಚಂದ್ರಾಸಿಂಗ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ತಿಳಿಸಿದ್ದಾರೆ.

ಇದಕ್ಕೂ ಮುನ್ನ ಸಂಜೆ 6ಕ್ಕೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಡಾ. ಬಸವಲಿಂಗ ಅವಧೂತರ ಭವ್ಯ ಮೆರವಣಿಗೆ ಜರುಗಲಿದೆ ಎಂದು ಹೇಳಿದ್ದಾರೆ.

19 ರಂದು ಸಂಜೆ 6ಕ್ಕೆ ವೀರಭದ್ರೇಶ್ವರ ರುದ್ರಾಭಿಷೇಕ, ಪಾದಪೂಜೆ, ರಾತ್ರಿ 8ಕ್ಕೆ ಕೋಲಾಟ, ಮಹಾ ಪ್ರಸಾದ ವಿತರಣೆ ನಡೆಯಲಿದೆ. 20 ರಂದು ಬೆಳಿಗ್ಗೆ 5ಕ್ಕೆ ರುದ್ರಾಭಿಷೇಕ, ಬೆಳಿಗ್ಗೆ 6ಕ್ಕೆ ಪಲ್ಲಕ್ಕಿ ಮೆರವಣಿಗೆ, ಬೆಳಿಗ್ಗೆ 7ಕ್ಕೆ ಅಗ್ನಿ ಕುಂಡ ಪೂಜೆ, ಮಧ್ಯಾಹ್ನ 12ಕ್ಕೆ ಮಹಾ ಪ್ರಸಾದ ವಿತರಣೆ, ಸಂಜೆ 6.01ಕ್ಕೆ ರಥೋತ್ಸವ, ರಾತ್ರಿ 8ಕ್ಕೆ ಭಜನೆ ಜರುಗಲಿದೆ ಎಂದು ತಿಳಿಸಿದ್ದಾರೆ.

ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

# ಉಕ್ಕು ಸಚಿವಾಲಯ ಹಿಂದಿ ಸಲಹಾ ಸಮಿತಿಗೆ ರಮೇಶ ಪಾಟೀಲ ನೇಮಕ



**ಬೀದರ್:ಏ.16:** ಕೇಂದ್ರ ಉಕ್ಕು ಸಚಿವಾಲಯದ ಹಿಂದಿ ಸಲಹಾ ಸಮಿತಿಯ ಸದಸ್ಯರಾಗಿ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ರಮೇಶ ಪಾಟೀಲ ಸೋಲಪುರ ಅವರನ್ನು ನೇಮಕ ಮಾಡಲಾಗಿದೆ.

ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಈ ಕುರಿತು ಆದೇಶ ಹೊರಡಿಸಿದ್ದಾರೆ.

ಎಚ್.ಡಿ. ಕುಮಾರಸ್ವಾಮಿ ಅವರು ಸಮಿತಿಯ ಅಧ್ಯಕ್ಷರಾಗಿದ್ದು, ಉಕ್ಕು ಖಾತೆ ರಾಜ್ಯ ಸಚಿವರು ಸಮಿತಿಯ ಉಪಾಧ್ಯಕ್ಷರಾಗಿದ್ದಾರೆ. ರಮೇಶ ಪಾಟೀಲ ಸೋಲಪುರ ಅವರ ಅಧಿಕಾರ ಅವಧಿ ಮೂರು ವರ್ಷ ಆಗಿದೆ.

ಸಂವಿಧಾನದಲ್ಲಿನ ಅಧಿಕೃತ

ಭಾಷೆಗೆ ಸಂಬಂಧಿಸಿದ ವಿಷಯಗಳ ಅನುಷ್ಠಾನಕ್ಕೆ ಸಲಹೆ ನೀಡುವುದು, ಅಧಿಕೃತ ಭಾಷಾ ಕಾಯ್ದೆ ಮತ್ತು ನಿಯಮಗಳ ಅನುಸರಣೆ ಪರಿಶೀಲನೆ, ಹಿಂದಿ ಬಳಕೆಗೆ ಉತ್ತೇಜನ ನೀಡುವುದು ಮೊದಲಾದವು ಸಮಿತಿಯ ಕಾರ್ಯಗಳಾಗಿವೆ.

ಗಾದಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೋಲಪುರ ಗ್ರಾಮ ಪಂಚಾಯಿತಿ ಸದಸ್ಯರಾಗಿ ರಾಜಕೀಯ ಜೀವನ ಆರಂಭಿಸಿದ ರಮೇಶ ಪಾಟೀಲ ಅವರಿಗೆ ಇದೀಗ ಕೇಂದ್ರ ಸರ್ಕಾರದ ಸಚಿವಾಲಯದ ಸಮಿತಿಯ ಸದಸ್ಯ ಸ್ಥಾನ ಒಲಿದು ಬಂದಿದೆ.

ಪಾಟೀಲ ಅವರು ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ. ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಜಿಲ್ಲೆಯಲ್ಲಿ ಪಕ್ಷದ ಸಂಘಟನೆ ಬಲಪಡಿಸಲು ಶ್ರಮಿಸುತ್ತಿದ್ದಾರೆ. ಎಚ್.ಡಿ. ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಅವರ ಅತ್ಯಂತ ಸಮೀಪವರ್ತಿಯಾಗಿದ್ದಾರೆ.

ತಮ್ಮನ್ನು ಕೇಂದ್ರದ ಉಕ್ಕು ಸಚಿವಾಲಯದ ಹಿಂದಿ ಸಲಹಾ ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ,

ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡರು, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ, ಎನ್‌ಡಿಎ ಮೈತ್ರಿ ಪಕ್ಷಗಳ ರಾಷ್ಟ್ರೀಯ, ರಾಜ್ಯ ವರಿಷ್ಠರು, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ, ಚುನಾಯಿತ ಪ್ರತಿನಿಧಿಗಳು ಹಾಗೂ ಮುಖಂಡರಿಗೆ ಕೃತಜ್ಞತೆ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು: ಡಿಸಿ



**ವಿಜಯಪುರ, ಏ. 16:** ವಿದ್ಯಾರ್ಥಿಗಳು ಸತತ ಅಧ್ಯಯನಶೀಲರಾದಾಗ ಮಾತ್ರ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಉನ್ನತ ಜೀವನ ನಡೆಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಸರಳ ಸಮಾರಂಭದಲ್ಲಿ 2026ರ ಮಾರ್ಚ್ ನಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಜಿಲ್ಲೆಗೆ ಕ್ರಮವಾಗಿ ಸ್ಥಾನ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತದಿಂದ ಸನ್ಮಾನಿಸಿ ಅವರು ಮಾತನಾಡಿದರು.

ಈ ದಿಸೆಯಲ್ಲಿ ವಿದ್ಯಾರ್ಥಿಗಳು ಆಯಾ ಶೈಕ್ಷಣಿಕ ವರ್ಷಾರಂಭದಿಂದಲೇ ಆಸಕ್ತಿಯಿಂದ ಓದಲಾರಂಭಿಸಿದರೆ ಪರೀಕ್ಷೆ ಯಶಸ್ಸು ನೀರು ಕುಡಿದಷ್ಟೇ ಸುಲಭವಾಗುತ್ತದೆ ಎಂದರು.

ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು

ಕಠಿಣ ಅಧ್ಯಯನ ಶೈಲಿ ರೂಢಿಸಿಕೊಳ್ಳಬೇಕು. ವಿಷಯ ಕರಗತ ಮಾಡಿಕೊಂಡು ಮನನ ಮಾಡಿಕೊಳ್ಳುವ ಮೂಲಕ ತಮ್ಮನ್ನು ತಾವು ಮೌಲ್ಯಮಾಪನಕ್ಕೊಳಡಿಸಿ ಕೊಂಡರೆ, ಓದಿದ್ದೆಲ್ಲವೂ ಸ್ಮೃತಿಪಟಲದಲ್ಲಿ ಉಳಿಯುತ್ತದೆ ಎಂದರು.

ವಿದ್ಯಾಭ್ಯಾಸದೊಟ್ಟಿಗೆ ದೈಹಿಕ ಚಟುವಟಿಕೆಗಳಿಗೂ ನೀಡಬೇಕು. ತಮಗೆ ಆಸಕ್ತಿದಾಯಕ ಕ್ರೀಡೆಗಳಲ್ಲೂ ತೊಡಗಿಸಿಕೊಂಡರೆ ಅಧ್ಯಯನ ಇನ್ನಷ್ಟು ಸುಲಭವಾಗುತ್ತದೆ ಎಂದರು.

ವಾಣಿಜ್ಯ ವಿಭಾಗದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸೇಂಟ್ ಜೋಸೆಫ್ ಪಿಯು ಕಾಲೇಜ್ ನ ಪ್ರಜ್ಞಾ ಗಲಗಲಿ, ದ್ವಿತೀಯ ಸ್ಥಾನ ಪಡೆದ ವಿ.ಬಿ ದರಬಾರ ಪಿಯು ಕಾಲೇಜಿನ ಸರ್ವಜ್ಞ ಗುರ್ಜಾಲ ಹಾಗೂ ತೃತೀಯ ಸ್ಥಾನ ಪಡೆದ ಶ್ರೀ ಬಿ.ಎಂ.ಪಾಟೀಲ ಕಾಲೇಜಿನ ಕನಿಶಾ ಕಮಲೇಶ ಪೋರವಾಲ, ವಿಜ್ಞಾನ ವಿಭಾಗದಲ್ಲಿ ಕ್ರಮವಾಗಿ ಪ್ರಥಮ ಸ್ಥಾನ ಪಡೆದ ನಗರದ ರೇಡಿಯಂಟ್ ಪಿಯು ಕಾಲೇಜಿನ ನುಝಾತ ಫಾತಿಮಾ ತಾಳಿಕೋಟಿ, ದ್ವಿತೀಯ ಸ್ಥಾನ ಪಡೆದ ಆಕ್ಸಫರ್ಡ್ ಪಿಯು ಕಾಲೇಜಿನ ಲಕ್ಷ್ಮಿ ಪರಸಪ್ಪ ಅಡಿಗಿಮನಿ, ಹಾಗೂ ತೃತೀಯ ಸ್ಥಾನ ಪಡೆದ ಶಾಂತಿನಿಕೇತನ ಪಿಯು ಕಾಲೇಜಿನ ವಿದ್ಯಾಶ್ರೀ ಪ್ರಕಾಶ ಕಾಮನಕೇರಿ, ಆಕ್ಸಫರ್ಡ್ ಪಿಯು ಕಾಲೇಜಿನ ಭಾಗ್ಯ ಪುಂಡಲಿಕಪ್ಪ ಹೊಸಮನಿ, ಇದೇ ಕಾಲೇಜಿನ ನಂದಿತಾ, ಶಾಂತಿನಿಕೇತನ ಪಿಯು ಕಾಲೇಜಿನ ಪೂಜಾ ಈಟಿ, ತುಂಗಳ ಸೈನ್ಸ್ ಪಿಯು ಕಾಲೇಜಿನ ಪೃಥ್ವಿ ಪತ್ತಾರ, ಸೇಂಟ್ ಜೋಸೆಫ್ ಪಿಯು ಕಾಲೇಜಿನ ಸಿದ್ದಿ ಜಿ ತೋನ್ಸಿವಾಲ್ ಹಾಗೂ ತುಂಗಳ ಸೈನ್ಸ್ ಪಿಯು ಕಾಲೇಜಿನ ಸುಶ್ಮಿತಾ ಈರಪ್ಪ ಕೊಪ್ಪಳ ನಿದರ್ಶನವಾಗಿದ್ದಾರೆ ಎಂದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿಗಳಾದ ಡಾ. ಆನಂದ .ಕೆ. ಅವರು ಕ್ರಮವಾಗಿ ಜಿಲ್ಲೆಗೆ ಸ್ಥಾನ ಪಡೆದ ಈ ವಿದ್ಯಾರ್ಥಿಗಳಿಗೆ ಶಾಲು ಹೊದಿಸಿ, ಸ್ಮರಣಿಕೆ ಹಾಗೂ ಪುಷ್ಪಗುಚ್ಛ ನೀಡಿ ಗೌರವಿಸಿ ಅಭಿನಂದಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ಕೆ. ಹೊಸಮನಿ ಮಾತನಾಡಿ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ಅವರು, ಈ ಸಾಧಕ ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ಆರ್ಥಿಕ ಸಹಾಯ ಒದಗಿಸಿ, ಈ ಮಕ್ಕಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಹಾರೈಸಿದ್ದಾರೆ ಎಂದು ಅವರು ಹೇಳಿದರು.

ಸನ್ಮಾನ ಸ್ವೀಕರಿಸಿದ ವಿದ್ಯಾರ್ಥಿಗಳು ತಮ್ಮ ಯಶಸ್ಸಿಗೆ ಕಾರಣರಾದ ಪೋಷಕರು, ಶಿಕ್ಷಕರು ಹಾಗೂ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾ ರಿಷಿ ಆನಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ.ಕೆ.ಹೊಸಮನಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳು, ಕಾಲೇಜುಗಳ ಪ್ರಾಂಶುಪಾಲರು, ಶಿಕ್ಷಕರು, ಪೋಷಕರು ಮತ್ತು ಗಣ್ಯರು ಉಪಸ್ಥಿತರಿದ್ದರು.

# ವಿಗ್ರಹ ಸ್ಥಾಪಿಸಿ ವಿಚಾರ ಕೊಲ್ಲುವ ಕಪಟ ರಾಜಕಾರಣ ಅರ್ಥಮಾಡಿಕೊಳ್ಳಬೇಕು: ಕೆ.ವಿ.ಪಿ

**ಬೆಂಗಳೂರು ಏ16:** ಅಂಬೇಡ್ಕರ್ ಅವರ ಮಂತ್ರಗಳು ಶತಮಾನದ ಬಳಿಕವೂ ಸ್ವಾಭಿಮಾನ ಮತ್ತು ಅಧಿಕಾರದ ಮಂತ್ರದಂಡವಾಗಿದೆ. ಅಂಬೇಡ್ಕರ್ ಅವರ ವಿಗ್ರಹಗಳನ್ನು ಸ್ಥಾಪಿಸಿ ವಿಚಾರಗಳನ್ನು ಕೊಲ್ಲುವ ಕಪಟ ರಾಜಕಾರಣ ಅರ್ಥಮಾಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಕೆ.ವಿ.ಪ್ರಭಾಕರ್ ಅವರು ಕರೆ ನೀಡಿದರು.



ದೂರದರ್ಶನದಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಶಿಕ್ಷಣ–ಸಂಘಟನೆ–ಹೋರಾಟ ಎನ್ನುವ ಮೂರು ಮಂತ್ರಗಳನ್ನು ಶತಮಾನದ ಹಿಂದೆ ಅಂಬೇಡ್ಕರ್ ನೀಡಿದರು. ಈಗ ಈ ಮಂತ್ರಗಳು ಮಂತ್ರದಂಡವಾಗಿ, ಅಧಿಕಾರದಂಡವೂ ಆಗಿದೆ. ಹೀಗಾಗಿ ಶತಮಾನ ಕಳೆದರೂ ಅಂಬೇಡ್ಕರ್ ಹೆಚ್ಚೆಚ್ಚು ಪ್ರಸ್ತುತರಾಗುತ್ತಿದ್ದಾರೆ ಎಂದರು.

ಕಳೆದ ಅಧಿವೇಶನದಲ್ಲಿ ನಮ್ಮ ಸರ್ಕಾರ ಜಾರಿಗೆ ತಂದ, ಮರ್ಯಾದೆಗೇಡು ಹತ್ಯೆಗಳ ವಿರುದ್ಧದ "ಇವ ನಮ್ಮವ ಇವ ನಮ್ಮವ" ಕಾಯ್ದೆ ಕೂಡ ಅಂಬೇಡ್ಕರ್ ಅವರ ಮಂತ್ರ, ಬಸವಣ್ಣನವರ ಆಶಯ ಮತ್ತು ಬುದ್ಧನ ಮಾರ್ಗದಲ್ಲಿ ರೂಪುಗೊಂಡಿದ್ದಾಗಿದೆ. ಮಹಾನ್ ಪುರುಷರ ವಿಗ್ರಹಗಳನ್ನು ಸ್ಥಾಪಿಸಿ ಅವರ ವಿಚಾರಗಳನ್ನು ಕೊಲ್ಲುವುದು ಇವತ್ತಿನ ಸಾಂಸ್ಕೃತಿಕ ರಾಜಕಾರಣವಾಗಿದೆ. ಆದರೆ ಅಂಬೇಡ್ಕರ್ ಅವರ ಶಿಕ್ಷಣ ಎನ್ನುವ ಮಂತ್ರದಿಂದ ಈಗ ಶೋಷಿತ ಸಮುದಾಯಗಳು "ವಿಗ್ರಹ ಪೂಜಿಸಿ, ವಿಚಾರ ಕೊಲ್ಲುವ" ಕಪಟ ರಾಜಕಾರಣವನ್ನು ಅರ್ಥ ಮಾಡಿಕೊಳ್ಳುವಷ್ಟು ಅರಿವನ್ನು ಗಳಿಸಿದ್ದಾರೆ ಎಂದರು.

ಹೀಗಾಗಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಕಾಲಘಟ್ಟಕ್ಕೆ ಸೀಮಿತವಾದ ನಾಯಕರಾಗದೆ, ಅವರ ವಿಚಾರಧಾರೆಗಳು ಇಂದಿನ ಸಂಕೀರ್ಣ ಸಮಾಜದಲ್ಲಿ ಹಿಂದೆಂದಿಗಿಂತಲೂ ಹೆಚ್ಚು ಪ್ರಸ್ತುತವೆನಿಸುತ್ತಿವೆ ಎಂದರು.

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಚಲುವಾದಿ ನಾರಾಯಣಸ್ವಾಮಿ, ದೂರದರ್ಶನ ಕಾರ್ಯಕ್ರಮ ಮುಖ್ಯಸ್ಥರಾದ ಆರತಿ ಹೆಚ್.ಎನ್, ದೂರ ದರ್ಶನ ಉಪ ಮಹಾ ನಿರ್ದೇಶಕರಾದ ಎ.ಹನುಮಂತ್, ಕೆ.ಪಿ.ಸಂಜಯ್, ನಿರ್ದೃಶಕರಾದ ಬಿ.ಎ.ಕೇಶವಮೂರ್ತಿ ಅವರು ಉಪಸ್ಥಿತರಿದ್ದರು.

# ಸಾಂಸ್ಕೃತಿಕ ನಾಯಕ ಬಸವಣ್ಣನ ಜಯಂತಿಅದ್ದೂರಿಯಾಗಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

**ತಾಳಿಕೋಟೆ:ಏ.16:** ಜಗಜ್ಯೋತಿ ಬಸವೇಶ್ವರ ಮತ್ತು ಕರ್ನಾಟಕ ಸಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಏಪ್ರೀಲ್ 20 ರಂದು ಅರ್ಥಪೂರ್ಣವಾಗಿ ಅದ್ದೂರಿಯಾಗಿ ತಾಲೂಕ ಆಡಳಿತದ ನೆತೃತ್ವದಲ್ಲಿ ಆಚರಿಸಲು ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಗಿದೆ ಇದಕ್ಕೆ ಎಲ್ಲರೂ ಸಹಕರಿಸಬೇಕೆಂದು ತಾಲೂಕಾ ತಹಶೀಲ್ದಾರ್ ಡಾ.ವಿನಯಾ ಹೂಗಾರ ಹೇಳಿದರು.



ಬುಧವಾರ ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ತಾಲೂಕಾ ಆಡಳಿತ ವತಿಯಿಂದ ಬಸವಣ್ಣನವರ ಜಯಂತಿ ಆಚರಣೆಯ ಕುರಿತು ಕರೆಯಲಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು 12ನೇ ಶತಮಾನದಲ್ಲಿ ಸಮಾನತೆಯ ಕ್ರಾಂತಿಯನ್ನು ತಂದ ವಿಶ್ವಗುರು ಅಣ್ಣ ಬಸವಣ್ಣನವರ ಜಯಂತಿಯನ್ನು ಅತ್ಯಂತ ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುವುದು.

ಏಪ್ರಿಲ್ 20 ರಂದು ಮುಂಜಾನೆ 8–30 ಘಂಟೆಗೆ ರಾಜವಾಡೆಯಿಂದ ಶ್ರೀ ಬಸವೇಶ್ವರರ ಭಾವಚಿತ್ರದ ಭವ್ಯ ಮೆರವಣಿಗೆ ಆರಂಭಿಸಲಾಗುವುದು. ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದ ಕತ್ರಿ ಬಜಾರ್, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ದಿಂದ ಬಸ್ ನಿಲ್ದಾಣದ ಮಾರ್ಗವಾಗಿ ಶ್ರೀ ಬಸವೇಶ್ವರ ವೃತ್ತಕ್ಕೆ ತಲುಪುವುದು. ನಂತರ ಅಲ್ಲಿಯೇ ವೇದಿಕೆ ಕಾರ್ಯಕ್ರಮ ಜರಗುವುದು.

ಜಯಂತಿಯನ್ನು ಸರ್ಕಾರದ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಪಟ್ಟಣದ ಪ್ರಮುಖ ವೃತ್ತಗಳನ್ನು ಅಲಂಕರಿಸಲಾಗುವುದು ಅಣ್ಣ ಬಸವಣ್ಣನವರ ತತ್ವಾದರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಲು ಉಪನ್ಯಾಸ ಆಯೋಜಿಸಲಾಗುವುದು. ಎಲ್ಲ ಕಾರ್ಯಕ್ರಮಗಳು ಶಾಂತಿಯುತವಾಗಿ ನಡೆಯುವಂತಾಗಲು ಪೊಲೀಸ್ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಶ್ರೀ ಬಸವೇಶ್ವರ ಉತ್ಸವ ಸಮಿತಿ ಅಧ್ಯಕ್ಷ ಮಹಾಂತೇಶ ಮುರಾಳ ಮಾತನಾಡಿ ಸಮಾನತೆಯ ಹರಿಕಾರರಾದ ವಿಶ್ವಗುರು ಬಸವಣ್ಣನವರ 893ನೇ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ತಾಲೂಕ ಆಡಳಿತ ತೆಗೆದುಕೊಳ್ಳುವ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ಸಮಾಜ ಬಾಂಧವರು ಸಂಪೂರ್ಣ ಸಹಕಾರ ನೀಡಲಿದ್ದಾರೆ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪ ಆಗದಂತೆ ನೋಡಿಕೊಳ್ಳಬೇಕು. ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರನ್ನು ಸೇರಿಸಲು ಪ್ರಯತ್ನಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಕಾಶಿನಾಥ ಮುರಾಳ, ಎಂ.ಎಸ್.ಸರಶಟ್ಟಿ, ಶರಣಗೌಡ ಪಾಟೀಲ, ತಿಪ್ಪಣ್ಣ ಸಜ್ಜನ, ಪರಶುರಾಮ ತಂಗಡಗಿ, ರಾಜು ಸಜ್ಜನ, ಅಶೋಕ ಚಿನಗುಡಿ, ಎಂ.ಎಸ್. ನಾಗರಾಳ, ನಿಂಗಣ್ಣ ಕುಂಟೋಜಿ, ರವಿ ಚಂದುಕರ, ದತ್ತು ಉಬಾಳೆ, ಎಸ್.ಎಂ.ಪಾಲ್ಕಿ, ಲಂಕೇಶ ಪಾಟೀಲ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ, ಪಿಎಸ್ಐ ಎಸ್.ಎಂ.ಪಡಶೆಟ್ಟಿ, ತಾಪಂ ಸಹಾಯಕ ನಿರ್ದೇಶಕಿ ಸುಜಾತ ಯಡ್ರಾಮಿ, ಪುರಸಭೆ ಕಂದಾಯ ನಿರೀಕ್ಷಕ ಸುರೇಶ ಅಮರಣ್ಣವರ ಹಾಗೂ ವಿವಿಧ ಇಲಾಖೆಗಳ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಸಮಾನತೆಯ ಹರಿಕಾರ ಅಣ್ಣ ಬಸವಣ್ಣನವರ ಆದರ್ಶಗಳು ಎಲ್ಲರಿಗೂ ಪ್ರೇರಕವಾಗಿವೆ ಅವರ ಜಯಂತ್ಯೋತ್ಸವ ಸಂಭ್ರಮವು ಮಾದರಿಯಾಗುವಂತೆ ತಾಲೂಕಾಡಳಿತದ ನೇತೃತ್ವದಲ್ಲಿ ನಡೆಯುವ ಈ ಜಯಂತ್ಯೋತ್ಸವಕ್ಕೆ ಎಲ್ಲರೂ ಸಹಕರಿಸಬೇಕು. – ಡಾ.ವಿನಯಾ ಹೂಗಾರ ತಾಲೂಕಾ ತಹಶಿಲ್ದಾರರು.

# ಜಾತಿ ಜನಗಣತಿ ಪ್ರಕ್ರಿಯೆಯಲ್ಲಿ ಓಬಿಸಿ ವರ್ಗಕ್ಕೆ ಪ್ರತ್ಯೇಕ ಗುರುತು ನೀಡಬೇಕು: ದೇವೇಂದ್ರ ಚಿಗರಳ್ಳಿ ಆಗ್ರಹ



ಕಲಬುರಗಿ :ಏ.16:ರಾಜ್ಯದಲ್ಲಿ ಜಾರಿಯಾಗುತ್ತಿರುವ ಜಾತಿ ಜನಗಣತಿ ಕಾರ್ಯವನ್ನು ಸ್ವಾಗತಿಸಿ ಅಭಿನಂದಿಸಿದ ರಾಷ್ಟ್ರೀಯ ಸಮಾಜ ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷರಾದ ದೇವೇಂದ್ರ ಚಿಗರಳ್ಳಿ, ಪ್ರಸ್ತುತ ಮನೆ–ಪಟ್ಟಿ ಸಂಗ್ರಹಣೆಯ ರೂಪರೇಖೆಯಲ್ಲಿ ಕಂಡುಬರುವ ಕೆಲವು ಗಂಭೀರ ಕೊರತೆಗಳ ಕುರಿತು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಾತಿ ಜನಗಣತಿ ದೀರ್ಘಕಾಲದಿಂದಲೂ ಸಮಾಜದ ನ್ಯಾಯಸಮ್ಮತ ಬೇಡಿಕೆಯಾಗಿದ್ದು, ಅದನ್ನು ಸರ್ಕಾರ ಕೈಗೆತ್ತಿಕೊಂಡಿರುವುದು ಶ್ಲಾಘನೀಯ ಬೆಳವಣಿಗೆಯಾಗಿದೆ ಎಂದು ತಿಳಿಸಿದ್ದಾರೆ. ಆದರೆ ಈ ಮಹತ್ವದ ಪ್ರಕ್ರಿಯೆಯನ್ನು ವೈಜ್ಞಾನಿಕ ಹಾಗೂ ಪಾರದರ್ಶಕವಾಗಿ ನಡೆಸುವ ನಿರೀಕ್ಷೆ ಜನರಲ್ಲಿ ಇದ್ದರೂ, ಪ್ರಸ್ತುತ ಪ್ರಶ್ನಾವಳಿಯ ವಿನ್ಯಾಸವು ಆ ನಂಬಿಕೆಗೆ ಧಕ್ಕೆಯುಂಟು ಮಾಡುವ ಸಾಧ್ಯತೆ ಇದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮನೆ–ಪಟ್ಟಿ ಪ್ರಶ್ನಾವಳಿಯ ಪ್ರಶ್ನೆ ಸಂಖ್ಯೆ 12ರಲ್ಲಿ ಸಾಮಾಜಿಕ ವರ್ಗೀಕರಣಕ್ಕಾಗಿ ಕೇವಲ ಅನುಸೂಚಿತ ಜಾತಿಗಳು (ಖಅ), ಅನುಸೂಚಿತ ಜನಜಾತಿಗಳು (ಖಖ) ಮತ್ತು "ಇತರೆ" ಎಂಬ ಮೂರು ವಿಭಾಗಗಳನ್ನಷ್ಟೇ ನೀಡಿರುವುದು ಸರಿಯಾದ ಕ್ರಮವಲ್ಲ ಎಂದು ಅವರು ತಿಳಿಸಿದ್ದಾರೆ. ವಿಶೇಷವಾಗಿ ಇತರೆ ಹಿಂದುಳಿದ ವರ್ಗಗಳು (ಔಃಅ) ಹಾಗೂ ಸಾಮಾನ್ಯ ವರ್ಗಕ್ಕೆ ಪ್ರತ್ಯೇಕ ಗುರುತು ಇಲ್ಲದಿರುವುದು, ಸಂಗ್ರಹವಾಗುವ ಮಾಹಿತಿಯ ನಿಖರತೆ ಮತ್ತು ವಿಶ್ವಾಸಾರ್ಹತೆಯನ್ನು ಪ್ರಶ್ನಿಸುವಂತಾಗಿದೆ ಎಂದು ಹೇಳಿದ್ದಾರೆ.

ವಿಶಾಲ ಜನಸಂಖ್ಯೆಯನ್ನು "ಇತರೆ" ಎಂಬ ಅಸ್ಪಷ್ಟ ವರ್ಗದಲ್ಲಿ ಸೇರಿಸುವುದು ಭವಿಷ್ಯದಲ್ಲಿ ಗಂಭೀರ ಸಮಸ್ಯೆಗಳಿಗೆ ಕಾರಣವಾಗಬಹುದು. 2011ರ ಸಾಮಾಜಿಕ–ಆರ್ಥಿಕ ಮತ್ತು ಜಾತಿ ಜನಗಣತಿ (ಖಇಅಅ) ಸಂದರ್ಭದಲ್ಲಿ ಕಂಡುಬಂದ ದೋಷಗಳು ಮರುಕಳಿಸುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ದೇಶದ ಓಬಿಸಿ ಜನಸಂಖ್ಯೆಯ ಬಗ್ಗೆ ನಿಖರ ಮಾಹಿತಿ ಲಭ್ಯವಾಗದ ಅಪಾಯವಿದ್ದು, ಸಂವಿಧಾನದ 15(4) ಮತ್ತು 16(4) ಕಲಂಗಳಡಿ ನೀಡಲಾಗುವ ಮೀಸಲಾತಿ ನೀತಿಗಳ ಮೇಲೂ ಪರಿಣಾಮ ಬೀಳಬಹುದು. ಜೊತೆಗೆ ಭವಿಷ್ಯದ ನೀತಿನಿರ್ಣಯ ಹಾಗೂ ಕ್ಷೇತ್ರ ಪುನರ್‌ವಿಭಜನೆ ಪ್ರಕ್ರಿಯೆಗಳಿಗೂ ತೊಂದರೆ ಉಂಟಾಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಈ ಸಮಸ್ಯೆಗಳಿಗೆ ಪರಿಹಾರವಾಗಿ ದೇವೇಂದ್ರ ಚಿಗರಳ್ಳಿ ಕೆಲವು ಮಹತ್ವದ ಸಲಹೆಗಳನ್ನು ನೀಡಿದ್ದಾರೆ. ಪ್ರಶ್ನೆ ಸಂಖ್ಯೆ 12ರಲ್ಲಿ ಓಬಿಸಿ ವರ್ಗವನ್ನು ಪ್ರತ್ಯೇಕವಾಗಿ ಸೇರಿಸುವಂತೆ ತಿದ್ದುಪಡಿ ಮಾಡಬೇಕು. ರಾಷ್ಟ್ರೀಯ ಮಟ್ಟದಲ್ಲಿ ಸಮಾಲೋಚನಾ ಸಭೆಗಳನ್ನು ನಡೆಸಿ ರಾಜಕೀಯ ಪಕ್ಷಗಳು, ಹಿಂದುಳಿದ ವರ್ಗ ಆಯೋಗಗಳು ಹಾಗೂ ತಜ್ಞರನ್ನು ಒಳಗೊಳ್ಳಬೇಕು. ಉಪಜಾತಿಗಳ ಮಾಹಿತಿಯನ್ನು ಸಂಗ್ರಹಿಸಲು ಸಮರ್ಪಕ ವ್ಯವಸ್ಥೆ ರೂಪಿಸಬೇಕು. ಜೊತೆಗೆ ಪ್ರಾಥಮಿಕ ಹಾಗೂ ಅಂತಿಮ ಮಾಹಿತಿಯ ಪ್ರಕಟಣೆಗೆ ಸ್ಪಷ್ಟ ವೇಳಾಪಟ್ಟಿಯನ್ನು ಘೋಷಿಸಬೇಕು ಎಂದು ಒತ್ತಾಯಿಸಿದ್ದಾರೆ.

ಜಾತಿ ಜನಗಣತಿಯ ಯಶಸ್ಸು ಅದರ ಆರಂಭಿಕ ಹಂತದ ನಿಖರತೆಯ ಮೇಲೆ ಅವಲಂಬಿತವಾಗಿದ್ದು, ಯಾವುದೇ ದೋಷಗಳು ದೀರ್ಘಕಾಲೀನ ಪರಿಣಾಮ ಬೀರುವ ಸಾಧ್ಯತೆ ಇದೆ. ಆದ್ದರಿಂದ ಮೊದಲ ಹಂತದ ಮುಂದಿನ ಜಾರಿಗೆ ಮುನ್ನ ಅಗತ್ಯ ತಿದ್ದುಪಡಿ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು ಸರ್ಕಾರವನ್ನು ವಿನಂತಿಸಿದ್ದಾರೆ.

# ಪರಿಸರ ಸಂರಕ್ಷಣೆಗೆ ಸಾಮಾಜಿಕ ಹೊಣೆಗಾರಿಕೆ ಹಿರಿದು : ಖಂಡ್ರೆ



**ಬೆಂಗಳೂರು, ಏ.16:** ಪ್ರಕೃತಿ, ಪರಿಸರ ಸಂರಕ್ಷಣೆ ಹಾಗೂ ಹಸಿರು ಹೊದಿಕೆ ಹೆಚ್ಚಳದಲ್ಲಿ ಸುಸ್ಥಿರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಪಾತ್ರ ಹಿರಿದಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟದ (ಎಫ್.ಕೆ.ಸಿಸಿಐ) ಆಯೋಜಿಸಿದ್ದ ಜಾಗತಿಕ ಸುಸ್ಥಿರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಶೃಂಗಸಭೆ 2026ರ ಪೂರ್ವಭಾವಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ನಾವಿಂದು, ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆಯ ಪರಿಣಾಮಗಳ ಕಾಲಘಟ್ಟದಲ್ಲಿ ನಿಂತಿದ್ದು, ಈ ಸಂದರ್ಭದಲ್ಲಿ ಸುಸ್ಥಿರ ಅಭಿವೃದ್ಧಿ, ಹವಾಮಾನ ಚೇತರಿಕೆ ಮತ್ತು ಸಮಗ್ರ ಪ್ರಗತಿಯ ಕಾರ್ಯತಂತ್ರಕ್ಕೆ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಚಾಲಕಶಕ್ತಿಯಾಗಿದೆ ಎಂದರು.

ಕರ್ನಾಟಕವು ಈ ಪಯಣದಲ್ಲಿ ವಿಶಿಷ್ಟ ಸ್ಥಾನದಲ್ಲಿದೆ. ಜಾಗತಿಕ ಜೀವವೈವಿಧ್ಯತೆಯ ಅದ್ಭುತ ತಾಣವಾದ ಪಶ್ಚಿಮ ಘಟ್ಟಗಳನ್ನು ಹೊಂದಿದ್ದು, ಹಲವು ಬಗೆಯ ವಿಶಿಷ್ಟ ಸಸ್ಯ ಸಂಕುಲ, ಪ್ರಾಣಿ ಸಂಕುಲ, ಪಕ್ಷಿ ಸಂಕುಲ ಹಾಗೂ ಕೀಟ ಸಂಕುಲಗಳ ತಾಣವಾದ ಈ ಸಮೃದ್ಧ ಕಾನನವನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು

ಪಶ್ಚಿಮ ಘಟ್ಟ ಭವಿಷ್ಯದ ಪೀಳಿಗೆಯ ಜೀವನಾಡಿ:ಈಶ್ವರ ಖಂಡ್ರೆ ಹಲವು ಜೀವನದಿಗಳ ಮೂಲವೇ ಪಶ್ಚಿಮಘಟ್ಟವಾಗಿದ್ದು, ಮಳೆಯ ಮಾರುತಗಳನ್ನು ತಡೆದು ದೇಶಾದ್ಯಂತ ವ್ಯಾಪಕವಾಗಿ ಮಳೆ ಸುರಿಸುವಂತೆ ಮಾಡುವ ಪಶ್ಚಿಮ ಘಟ್ಟಗಳನ್ನು ಉದ್ದಿಮೆದಾರರು ಕೇವಲ ಒಂದು ಸಂಪನ್ಮೂಲವಾಗಿ ನೋಡದೆ, ಭವಿಷ್ಯದ ಪೀಳಿಗೆಯ ಜೀವನಾಡಿಯಾಗಿ ನೋಡಬೇಕು ಎಂದು ಹೇಳಿದರು.

ಹಸಿರು ಹೊದಿಕೆ ಹೆಚ್ಚಳಕ್ಕೆ ಸಿಎಸ್‌ಆರ್:

ಬೆಂಗಳೂರು ನಗರ ಒಂದು ಕಾಲದಲ್ಲಿ ನಿವೃತ್ತರ ಸ್ವರ್ಗ, ಹವಾನಿಯಂತ್ರಿತ ನಗರ ಎಂಬ ಖ್ಯಾತಿ ಪಡೆದಿತ್ತು. ಇಂದು ಬೆಂಗಳೂರು ಕೂಡ ಕಾಂಕ್ರೀಟ್ ಕಾಡಾಗುತ್ತಿದ್ದು, ತಾಪಮಾನದ ಏರಿಕೆಯ ಅನುಭವ ಆಗುತ್ತಿದೆ. ಬೆಂಗಳೂರು ನಗರದಲ್ಲಿ ವಾಹನಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದ್ದು, ಧೂಳು, ಹೊಗೆಯಿಂದಾಗಿ ವಾಯುಗುಣಮಟ್ಟವೂ ಕುಸಿಯುತ್ತಿದೆ. ಈ ನಿಟ್ಟಿನಲ್ಲಿ ಬೆಂಗಳೂರು ನಗರ ದೆಹಲಿಯಂತೆ ಮತ್ತೊಂದು ಗ್ಯಾಸ್ ಚೇಂಬರ್ ಆಗದಂತೆ ತಡೆಯಲು ಈಗಿನಿಂದಲೇ ಕ್ರಮ ವಹಿಸುವುದು ಅತ್ಯಗತ್ಯ ಎಂದರು.

ಬೆಂಗಳೂರಿನಲ್ಲಿ ಲಾಲ್ ಬಾಗ್ ಮತ್ತು ಕಬ್ಬನ್ ಪಾರ್ಕ್ ಬಳಿಕ ಸರಿ ಸುಮಾರು ಶತಮಾನದ ತರುವಾಯ 153 ಎಕರೆ ವಿಶಾಲ ಪ್ರದೇಶದಲ್ಲಿ ಬೃಹತ್ ಜೈವಿಕ ಉದ್ಯಾನ ನಿರ್ಮಿಸಲು ತೀರ್ಮಾನಿಸಲಾಗಿದ್ದು, ಬೆಂಗಳೂರು ಉತ್ತರ ತಾಲೂಕು ಯಲಹಂಕ ಬಳಿಯ ಮಾದಪ್ಪನಹಳ್ಳಿಯಲ್ಲಿ ವಿಶ್ವಗುರು ಬಸವಣ್ಣ ಬೃಹತ್ ಜೈವಿಕ ಉದ್ಯಾನ ಅಭಿವೃದ್ಧಿ ಪಡಿಸಲಾಗುತ್ತಿದೆ. ಇದಕ್ಕಾಗಿ 50 ಕೋಟಿ ರೂ. ಬಿಡುಗಡೆಯಾಗಿದ್ದು, ಶೀಘ್ರವೇ ಕಾಮಗಾರಿ ಆರಂಭವಾಗಲಿದೆ. ಬೆಂಗಳೂರು ನಗರದಲ್ಲಿ ಇಂತಹ ಒಂದು ಬೃಹತ್ ಉದ್ಯಾನ ನಿರ್ಮಾಣಕ್ಕೆ ನೀವೆಲ್ಲರೂ ಕೈಜೋಡಿಸಬೇಕು. ಸಿಎಸ್.ಆರ್. ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಅರಣ್ಯೀಕರಣ, ಕ್ಷೀಣಿಸಿದ ಅರಣ್ಯಗಳ ಮರುಸ್ಥಾಪನೆ ಮತ್ತು ನಗರ ಹಸಿರು ಹೊದಿಕೆ ಹೆಚ್ಚಳದಂತಹ ಉಪಕ್ರಮಗಳಲ್ಲಿ ಕೈಗಾರಿಕೋದ್ಯಮಿಗಳು ಸಕ್ರಿಯವಾಗಿ ಭಾಗವಹಿಸಿದರೆ, ಅದು ಮುಂದಿನ ಪೀಳಿಗೆಗೆ ಶುದ್ಧ ಗಾಳಿಯ, ನಿರ್ಮಲ ಪರಿಸರದ, ಸುಗಮ ಜೀವನವನ್ನು ಖಾತ್ರಿ ಪಡಿಸುತ್ತವೆ ಎಂದ ಈಶ್ವರ ಖಂಡ್ರೆ, ಸಾರ್ವಜನಿಕರು, ತಮ್ಮ ಮನೆಯ ಸೌಂದರ್ಯಕ್ಕೆ ಅಡ್ಡಿ ಯಾಗುತ್ತದೆ, ಮನೆಯ ಮುಂದೆ ಎಲೆ ಉದುರುತ್ತದೆ ಎಂದು ಮರ, ಗಿಡ ಕಡಿಯದೆ, ಹಸಿರು ಉಳಿಸಬೇಕು. ಇಲ್ಲವಾದರೆ ಮುಂದೆ ಉಸಿರಾಟಕ್ಕೂ ಕಷ್ಟ ಪಡಬೇಕಾಗುತ್ತದೆ ಎಂದು ಹೇಳಿದರು.

ನಾವು ತಂತ್ರಜ್ಞಾನ ಯುಗದಲ್ಲಿದ್ದೇವೆ. ಉಪಗ್ರಹ ಮೇಲ್ವಿಚಾರಣೆ ಮತ್ತು ಕೃತಕ ಬುದ್ಧಿಮತ್ತೆ ಚಾಲಿತ ಅರಣ್ಯ ನಿರ್ವಹಣೆಯಿಂದ ಹಿಡಿದು ನೀರಿನ ಸಂರಕ್ಷಣೆ ಮತ್ತು ವನ್ಯಜೀವಿಗಳ ಚಲನವಲನದ ಮೇಲಿನ ನಿಗಾಕ್ಕೆ ತಂತ್ರಜ್ಞಾನ ಹೊಸ ಪರಿಹಾರವಾಗಿದೆ. ಈ ಅತ್ಯಾಧುನಿಕ ಸೌಲಭ್ಯ ಅಳವಡಿಸಲು ಉಪಕರಣಗಳ ಖರೀದಿಯಲ್ಲೂ ಸಿಎಸ್‌ಆರ್ ನಿಧಿ ಉಪಯುಕ್ತವಾಗಿದೆ ಎಂದರು.

ಜೀವನವೂ ಇರಬೇಕು, ಜೀವನೋಪಾಯವೂ ಇರಬೇಕು. ಪ್ರಕೃತಿಯೂ ಉಳಿಯಬೇಕು, ಜೀವನವೂ ನಡೆಯಬೇಕು. ಅಭಿವೃದ್ಧಿಯೂ ಆಗಬೇಕು. ಹಸಿರು ಉಳಿಸಿಕೊಂಡು, ಬೆಳೆಸಿಕೊಂಡು ಅಭಿವೃದ್ಧಿ ಸಾಧಿಸುವುದೇ ಸುಸ್ಥಿರತೆಯ ಮಂತ್ರ. ? ಇದು ಇಂದಿನ ಅಗತ್ಯ ಮತ್ತು ಅನಿವಾರ್ಯ. ಈ ಹಾದಿಯಲ್ಲಿ ನಡೆಯಲು ಸರ್ಕಾರ ಬದ್ಧವಾಗಿದೆ. ಇದಕ್ಕೆ ಉದ್ದಿಮೆಗಳ ಸಹಕಾರ ನೀಡಬೇಕು ಎಂದರು.

ಎಫ್.ಕೆಸಿಸಿಐನ ಕೀರ್ತನ್ ಕುಮಾರ್ ಅರಣ್ಯ ಇಲಾಖೆ 10000 ಸಸಿಗಳನ್ನು ನೀಡುತ್ತಿದ್ದು, ಇವುಗಳನ್ನು ನೆಟ್ಟು ಬೆಳೆಸುವ ಜವಾಬ್ದಾರಿಯನ್ನು ನಿರ್ವಹಿಸುವುದಾಗಿ ತಿಳಿಸಿದರು.

ಅಧ್ಯಕ್ಷರಾದ ಉಮಾರೆಡ್ಡಿ, ನವ್ ಕಿಸ್ಲೆ, ಸಾಯಿಪ್ರಸಾದ್ ಮತ್ತಿತರರು ಪಾಲ್ಗೊಂಡಿದ್ದರು.

# ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ವಿವಿಧ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು:** ಜಿಲ್ಲೆಯ ಅರಕೇರಾ ತಾಲೂಕಿನ ಕೊತ್ತದೊಡ್ಡಿಯ ಏಕಲವ್ಯ ಮಾದರಿ ವಸತಿ ಶಾಲೆ ಮತ್ತು ಕಾಲೇಜಿನಲ್ಲಿ 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಖಾಲಿಯಿರುವ ವಿವಿಧ ಹುದ್ದೆಗಳಿಗೆ ಗುತ್ತಿಗೆ ಆಧಾರದಲ್ಲಿ ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕನ್ನಡ ಶಿಕ್ಷಕರ 01ಹುದ್ದೆಗೆ ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಮತ್ತು ಬಿ.ಎಡ್ ಶೈಕ್ಷಣಿಕ ಅರ್ಹತೆ ಹೊಂದಿರುವ 40ವರ್ಷದೊಳಗಿನ ಅಭ್ಯರ್ಥಿಗಳಿಗೆ 35 ಸಾವಿರ ರೂ. ವೇತನ ನೀಡಲಾಗುವುದು. ಕಂಪ್ಯೂಟರ್ ವಿಜ್ಞಾನ, ಮಹಿಳಾ ಕ್ರೀಡಾ ತರಬೇತುದಾರರು, ಸಂಗೀತ ಶಿಕ್ಷಕರ ತಲಾ 01 ಹುದ್ದೆಗೆ ಸಂಬಧಿತ ಸ್ನಾತಕ ಪದವಿ ಮತ್ತು ಬಿ.ಎಡ್ ಶೈಕ್ಷಣಿಕ ಅರ್ಹತೆ ಹೊಂದಿರುವ 35ವರ್ಷದೊಳಗಿನ ಅಭ್ಯರ್ಥಿಗಳಿಗೆ 33 ಸಾವಿರ ರೂ. ವೇತನ ನೀಡಲಾಗುವುದು. ಶೈಕ್ಷಣಿಕ ಸಲಹೆಗಾರ 01 ಹುದ್ದೆಗೆ ಮನೋವಿಜ್ಞಾನದಲ್ಲಿ / ಕ್ಲಿನಿಕಲ್ ಮನೋವಿಜ್ಞಾನದಲ್ಲಿ ಸ್ನಾತಕೋತ್ತರ ಪದವಿ ಶೈಕ್ಷಣಿಕ ಅರ್ಹತೆ ಹೊಂದಿರುವ 30ವರ್ಷದೊಳಗಿನ ಅಭ್ಯರ್ಥಿಗಳಿಗೆ 35,400 ರೂ. ವೇತನ ನೀಡಲಾಗುವುದು. ಸ್ಟಾಫ್ ನರ್ಸ್ 01 ಹುದ್ದೆಗೆ ಬಿ.ಎಸ್ಸಿ. ನರ್ಸಿಂಗ್/ ಡಿಪ್ಲೊಮಾ ಇನ್ ಜಿ.ಎನ್.ಎಂ ಪದವಿ ಪಡೆದ 35 ವರ್ಷದೊಳಗಿನ ಅಭ್ಯರ್ಥಿಗಳಿಗೆ 29,200 ರೂ. ವೇತನ ನೀಡಲಾಗುವುದು. ಕ್ಯಾಟರಿಂಗ್ ಅಸಿಸ್ಟೆಂಟ್ 01ಹುದ್ದೆಗೆ ಹೋಟೆಲ್ ಮ್ಯಾನೇಜ್‌ಮೆಂಟ್/ ಕ್ಯಾಟರಿಂಗ್/ ಹಾಸ್ಪಿಟಾಲಿಟಿ ವಿಷಯಗಳಲ್ಲಿ ಮೂರು ವರ್ಷಗಳ ಪದವಿ ಪಡೆದ 35 ವರ್ಷದೊಳಗಿನ ಅಭ್ಯರ್ಥಿಗಳಿಗೆ 25,200 ರೂ. ವೇತನ ನೀಡಲಾಗುವುದು. ಎಲೆಕ್ಟ್ರಿಷಿಯನ್ ಕಂ. ಪ್ಲಂಬರ್ 01 ಹುದ್ದೆಗೆ 10ನೇ ತರಗತಿ + ಐ.ಟಿ.ಐ. ಅಥವಾ ಡಿಪ್ಲೋಮಾ ಪಡೆದ 45 ವರ್ಷದೊಳಗಿನ ಅಭ್ಯರ್ಥಿಗಳಿಗೆ 19.900 ರೂ. ವೇತನ ನೀಡಲಾಗುವುದು. ಹೆಡ್ ಕುಕ್– ಮುಖ್ಯ ಅಡುಗೆಗಾರರು (ಪುರುಷ) 01 ಹುದ್ದೆಗೆ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. 35ವರ್ಷದೊಳಗಿನ ಅಭ್ಯರ್ಥಿಗಳಿಗೆ 15,069 ರೂ. ವೇತನ ನೀಡಲಾಗುವುದು. ಅಡುಗೆ ಸಹಾಯಕರು (ಪುರುಷ) 02 ಹುದ್ದೆಗಳಿಗೆ 10ನೇ ತರಗತಿಯಲ್ಲಿ ಉತ್ತೀರ್ಣರಾದ 30 ವರ್ಷದೊಳಗಿನ ಅಭ್ಯರ್ಥಿಗಳಿಗೆ 14,069 ರೂ. ವೇತನ ನೀಡಲಾಗುವುದು. ಸೆಕ್ಯುರಿಟಿ ಗಾರ್ಡ್– ಭದ್ರತಾ ಸಿಬ್ಬಂದಿ 02ಹುದ್ದೆಗೆ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. 30 ವರ್ಷದೊಳಗಿನ ಅಭ್ಯರ್ಥಿಗಳಿಗೆ 15 ಸಾವಿರ ರೂ. ವೇತನ ನೀಡಲಾಗುವುದು. ಗಾರ್ಡನರ್ 01 ಹುದ್ದೆಗೆ ಹಾಗೂ ಸ್ವೀಪರ್ 01ಹುದ್ದೆಗೆ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. 30 ವರ್ಷದೊಳಗಿನ ಅಭ್ಯರ್ಥಿಗಳಿಗೆ 15 ಸಾವಿರ ರೂ. ವೇತನ ನೀಡಲಾಗುವುದು.

ಆಸಕ್ತಿಯುಳ್ಳವರು ಇತ್ತೀಚಿನ ವೈಯಕ್ತಿಕ ವಿವರಗಳೊಂದಿಗೆ (ಒಂದು ಇತ್ತೀಚಿನ ಭಾವಚಿತ್ರ) ತಮ್ಮ ವಿದ್ಯಾಭ್ಯಾಸದ ಒಂದು ಸೆಟ್ ನಕಲು ಪ್ರತಿಯನ್ನು ಏಪ್ರಿಲ್ 23ರೊಳಗಾಗಿ ಅರ್ಜಿಯನ್ನು ಸಲ್ಲಿಸಿ, ಏಪ್ರಿಲ್ 28ರಂದು ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಏಕಲವ್ಯ ಮಾದರಿ ವಸತಿ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲರಾದ ಸುರೇಶ್ ಕುಮಾರ್ ವರ್ಮ, ಮೊ.ಸಂ. 6306092667 ಅಥವಾ ಇಂಗ್ಲೀಷ್ ಶಿಕ್ಷಕರರಾದ ರವಿಕುಮಾರ್ ಜಿ. ಮೊ. ಸಂಖ್ಯೆ: 7090104974ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಪುಸ್ತಕ ಸೊಗಸು ಬಹುಮಾನಕ್ಕೆ ಅರ್ಜಿ ಆಹ್ವಾನ

**ರಾಯಚೂರು:** ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2025ರ ಕ್ಯಾಲೆಂಡರ್ ವರ್ಷದ ಜನವರಿಯಿಂದ ಡಿಸೆಂಬರ್ ವರೆಗೂ ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ವಿವಿಧ ಕನ್ನಡ ಪುಸ್ತಕ ಸೊಗಸು ಬಹುಮಾನಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಪ್ರಕಾಶಕರು, ಮುದ್ರಕರು, ಕಲಾವಿದರು ಅರ್ಜಿಸಲ್ಲಿಸಬಹುದಾಗಿದೆ. ಪುಸ್ತಕದ ಹೆಸರು, ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು, ಮುಖಪುಟ ಚಿತ್ರರಚನೆಯ ಕಲಾವಿದರ ಹೆಸರು / ಚಿತ್ರಕಲಾವಿದರ ಪೂರ್ಣ ವಿಳಾಸ / ದೂರವಾಣಿ ಸಂಖ್ಯೆ ಈ ಎಲ್ಲಾ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ಅರ್ಜಿ ನಮೂನೆಯೊಂದಿಗೆ ಮೇ.11ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು–560 002 ಈ ವಿಳಾಸಕ್ಕೆ ಕಳುಹಿಸಿ ಕೊಡಬಹುದಾಗಿದೆ. ಸಲ್ಲಿಸಲಾಗುವ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಕೊನೆಯ ದಿನಾಂಕ ಮುಗಿದ ನಂತರ ಬಂದ ಪುಸ್ತಕಗಳನ್ನು ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ. ಅರ್ಜಿ ನಮೂನೆಯನ್ನು ವೆಬ್‌ಸೈಟ್ ವಿಳಾಸ: https://kpp.karnataka.gov.in ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು –560002 ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಆಡಳಿತಾಧಿಕಾರಿಗಳಾದ ಕೆ.ಬಿ.ಕಿರಣ್ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ವಾಹನಗಳ ಬಾಕಿ ತೆರಿಗೆ ಪಾವತಿಸಲು ಸೂಚನೆ

**ರಾಯಚೂರು:** ರಾಯಚೂರಿನ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಮೋಟಾರು ವಾಹನಗಳ ಬಾಕಿ ತೆರಿಗೆ ವಸೂಲಾತಿ ಸಂಬಂಧ 2026ರ ಏಪ್ರಿಲ್ ತಿಂಗಳಿನಿಂದ ವಿಶೇಷ ತೆರಿಗೆ ಬಾಕಿ ವಸೂಲಾತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಮಾಲೀಕರು ತೆರಿಗೆಯನ್ನು ತಕ್ಷಣವೇ ಆನ್ ಲೈನ್ ಅಥವಾ ಆರ್. ಟಿ. ಓ. ಕಚೇರಿಗೆ ಖುದ್ದು ಭೇಟಿ ನೀಡಿ ಬಾಕಿ ತೆರಿಗೆಯನ್ನು ಪಾವತಿಸಬೇಕೆಂದು ಕೋರಲಾಗಿದೆ.

ನಿಯಮಾವಳಿಗಳಂತೆ ಯಾವುದೇ ವಾಹನವು ಸಾರ್ವಜನಿಕ ರಸ್ತೆಗೆ ಇಳಿಯುವ ಮೊದಲೇ ಮುಂಗಡವಾಗಿ ತೆರಿಗೆಯನ್ನು ಪಾವತಿ ಮಾಡಬೇಕಾಗಿದೆ. ವಾಹನ ಮಾಲೀಕರು ತೆರಿಗೆ ಪಾವತಿ ಮಾಡದಿದ್ದರೆ. ಸಾರಿಗೆ ಇಲಾಖೆಯಿಂದ ಮಾನ್ಯ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ಹೂಡುತ್ತದೆ. ಈ ಪ್ರಕಟಣೆಯನ್ನು ಇಲಾಖಾ ಸೂಚನೆ ಎಂದು ತಿಳಿದುಕೊಳ್ಳಬೇಕು. ಬಾಕಿ ತೆರಿಗೆ ವಾಹನ ಮಾಲೀಕರು ಜವಾಬ್ದಾರಿ ಮರೆತು ಬಾಕಿ ತೆರಿಗೆಯನ್ನು ತಕ್ಷಣವೇ ಪಾವತಿ ಮಾಡಬೇಕೆಂದು ರಾಯಚೂರಿನ ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವದುರ್ಗ ತಾಲೂಕಿನ ವಿವಿಧ ಹಳ್ಳಿಗಳಿಗೆ ಆರ್.ಸಿ.ಹೆಚ್ ಅಧಿಕಾರಿ ಭೇಟಿ, ಪರಿಶೀಲನೆ

# 1.15 ಕೋಟಿ ಮೌಲ್ಯದ 385 ಮೊಬೈಲ್ ಜಪ್ತಿ


ಪಶ್ಚಿಮ ವಿಭಾಗ ಪೊಲೀಸ್ ಠಾಣೆ ಪೊಲೀಸರು ವಶಪಡಿಸಿಕೊಂಡಿರುವ 1 ಕೋಟಿ ರೂ. ಬೆಲೆಬಾಳುವ ಮೊಬೈಲ್‌ಗಳನ್ನು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್‌ಸಿಂಗ್‌ರವರು ಪರಿಶೀಲನೆ ನಡೆಸಿದರು. ಪೊಲೀಸ್ ಅಧಿಕಾರಿಗಳು ಇದ್ದಾರೆ.

ಬೆಂಗಳೂರು,ಏ.16–ಸಿಇಐಆರ್ ತಂತ್ರಾಂಶದ ಮೂಲಕ ಹಲವಾರು ಪ್ರಕರಣಗಳಲ್ಲಿ ಕಳುವಾಗಿದ್ದ ವಿವಿಧ ಕಂಪನಿಯ 1.15 ಕೋಟಿ ಮೌಲ್ಯದ 385 ಮೊಬೈಲ್ ಗಳನ್ನು ವಶಪಡಿಸಿಕೊಳ್ಳುವಲ್ಲಿ ಪೂರ್ವ ವಿಭಾಗದ ಪೊಲೀಸರು ಯಶಸ್ವಿಯಾಗಿದ್ದಾರೆ.

ಪೂರ್ವ ವಿಭಾಗದ 14 ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಸಾರ್ವಜನಿಕರು ಕಳೆದುಕೊಂಡಿದ್ದ ಹಾಗೂ ಕಳುವಾಗಿದ್ದ ಮೊಬೈಲ್ ಗಳನ್ನು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ನಿರಂತರ ಸಿಇಐಆರ್ ಪೋರ್ಟಲ್‌ನ ಸಹಾಯದಿಂದ ಮೊಬೈಲ್ ಫೋನ್‌ಗಳ ಪತ್ತೆ ಕಾರ್ಯ ಕೈಗೊಂಡಿದ್ದರು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಕಳೆದ ಮಾರ್ಚ್ ತಿಂಗಳಲ್ಲಿ ವಿವಿಧ ಕಂಪನಿಯ 385 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಬಾಣಸವಾಡಿ 87,ಜೆ.ಬಿ ನಗರ 81,ಗೋವಿಂದಪುರ 35,ಕೆ.ಜಿ ಹಳ್ಳಿ 30, ಹಲಸೂರು 30,ಡಿ.ಜೆ ಹಳ್ಳಿ 29,ಹೆಣ್ಣೂರು 19,ಕಮರ್ಷಿಯಲ್ ಸ್ಟ್ರೀಟ್ 16, ಪುಲಕೇಶಿನಗರ 15, ಇಂದಿರನಗರ 12 ಸೇರಿ ಬೈಯ್ಯಪ್ಪನಹಳ್ಳಿ 8 ಸೇರಿ 385 ಮೊಬೈಲ್ ಗಳನ್ನು ಜಪ್ತಿ ಮಾಡಲಾಗಿದೆ.



ಸಾರ್ವಜನಿಕರು ಕಳೆದುಕೊಂಡ ಮೊಬೈಲ್ ಫೋನ್ ವಿವರವನ್ನು ಸಿಇಎಆರ್ ಪೋರ್ಟಲ್‌ನಲ್ಲಿ ದಾಖಲಿಸುವುದರಿಂದ ಅಥವಾ ಪೊಲೀಸ್ ಠಾಣೆಗಳಲ್ಲಿ ದೂರು ನೀಡುವುದರಿಂದ ಮೊಬೈಲ್ ಗಳನ್ನು ಪತ್ತೆ ಮಾಡಲು ಅನುಕೂಲವಾಗಲಿದೆ ಎಂದು ಹೇಳಿದರು.

ಪೂರ್ವ ವಿಭಾಗದ ಡಿಸಿಪಿ ಡಾ.ವಿಕ್ರಮ್ ಅಮಟೆ, ಮಾರ್ಗದರ್ಶನದಲ್ಲಿ ಹಲಸೂರು, ಪುಲಿಕೇಶಿನಗರ, ಬಾಣಸವಾಡಿ, ಕೆ.ಜಿ.ಹಳ್ಳಿ ಉಪವಿಭಾಗಗಳ ಹಾಗೂ ಸೈಬರ್ ಕ್ರೈಂ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಆಯುಕ್ತರವರುಗಳ ನೇತೃತ್ವದಲ್ಲಿ, ಪೂರ್ವ ವಿಭಾಗದ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳ ತಂಡ ಮೊಬೈಲ್ ಗಳನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE